www.pravasiprapancha.com

ಪ್ರವಾಸಿ ಪ್ರಪಂಚ ಅಂದ್ರೆ, ಬರೀ ಪತ್ರಿಕೆ ಅಷ್ಟೇ ಅಲ್ಲ!
ಕ್ಷಣ ಕ್ಷಣಕ್ಕೂ ಮಾಹಿತಿ ನೀಡುವ
ಸಮಗ್ರ ವೆಬ್‌ಸೈಟ್
ವಿಸಿಟ್ ಮಾಡಿ

₹ 6 @vishwavaninews epaper.vishwavani.news vishwavani.news **ಬೆಂಗಳೂರು** | ಹುಬ್ಬಳ್ಳಿ | ಮಂಗಳೂರು | ದಾವಣಗೆರೆ | ಕಲಬುರಗಿ | ಬೆಳಗಾವಿ **ಬುಧವಾರ 25.06.2025** **ಸಂಪುಟ:** 10 **ಸಂಚಿಕೆ:** 162 **ಪುಟಗಳು:** 12 ಪ್ರಧಾನ ಸಂಪಾದಕ: ವಿಶ್ವೇಶ್ವರ ಭಟ್

ವಿಶ್ವವಾಣಿ
ವಿಶ್ವಾಸವೇ ವಿಶ್ವ

ಬೆನ್ ಡಕೆಟ್ ಶತಕದಾಟ ಇಂಗ್ಲೆಂಡ್‌ಗೆ ಗೆಲುವು

ಬೆನ್ ಡಕೆಟ್ ಅವರ 149 ರನ್‌ಗಳ ನೆರವಿನಿಂದ ಇಂಗ್ಲೆಂಡ್ ತಂಡವು ಭಾರತದ ವಿರುದ್ಧ ಮೊದಲ ಟೆಸ್ಟ್ ಕ್ರಿಕೆಟ್‌ನಲ್ಲಿ 5 ವಿಕೆಟ್‌ಗಳ ಗೆಲುವು ಪಡೆಯಿತು.

ಬಾಂಬ್ ಹಾಕಿ ವಿರಾಮ ಘೋಷಿಸಿದ ದೊಡ್ಡಣ್ಣ | ಅಮೆರಿಕ ಸೇನಾ ನೆಲೆಗಳ ಮೇಲೆ ಇರಾನ್ ದಾಳಿ ಬೆನ್ನಿಗೇ ವಿರಾಮ ಜಾರಿ | 12 ದಿನಗಳ ಯುದ್ಧ ಅಂತ್ಯ

ಕೊನೆಗೂ ಕದನ ವಿರಾಮ

ವಾಷಿಂಗ್ಟನ್: ಇಸ್ರೇಲ್‌ಗೆ ಬೆಂಬಲವಾಗಿ ನಿಂತು ಇರಾನ್ ಮೇಲೆ ಬಾಂಬ್ ಹಾಕಿದ್ದ ವಿಶ್ವದ ದೊಡ್ಡಣ್ಣ ಅಮೆರಿಕವೇ ಇಸ್ರೇಲ್-ಇರಾನ್ ನಡುವಿನ ಕದನಕ್ಕೆ ವಿರಾಮ ಘೋಷಿಸಿದ್ದು, ಆ ಮೂಲಕ ಮಧ್ಯಪ್ರಾಚ್ಯವನ್ನು ಬೆಚ್ಚಿಬೀಳಿಸಿದ 12 ದಿನಗಳ ಯುದ್ಧ ಕೊನೆ ಗೊಂಡಿದೆ.

ಪರಮಾಣು ಕೇಂದ್ರಗಳ ಮೇಲೆ ದಾಳಿಗೆ ಪ್ರತೀಕಾರ ವಾಗಿ ಕತಾರ್‌ನಲ್ಲಿರುವ ಅಮೆರಿಕದ ಸೇನಾ ನೆಲೆಗಳ ಮೇಲೆ ಸೋಮವಾರ ಇರಾನ್ ಕ್ಷಿಪಣಿ ದಾಳಿ ನಡೆಸಿದ ಬೆನ್ನಲ್ಲೇ 'ಉಭಯ ರಾಷ್ಟ್ರಗಳ ನಡುವೆ ಕದನ ವಿರಾಮ ಏರ್ಪಟ್ಟಿದೆ' ಎಂದು ಟ್ರಂಪ್ ಘೋಷಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಟ್ರುತ್‌ನಲ್ಲಿ ಪೋಸ್ಟ್ ಮಾಡಿರುವ ಟ್ರಂಪ್ ಅವರು, 'ಇಸ್ರೇಲ್ ಮತ್ತು ಇರಾನ್ ರಾಷ್ಟ್ರಗಳ ನಡುವೆ ಸಂಪೂರ್ಣ ಕದನ ವಿರಾಮ ಒಪ್ಪಂದವಾಗಿದೆ. ಎರಡೂ ದೇಶಗಳು ಕದನ ವಿರಾಮಕ್ಕೆ ಒಪ್ಪಿಕೊಂಡಿವೆ. ಎಲ್ಲರಿಗೂ ಅಭಿನಂದನೆಗಳು. ಇಸ್ರೇಲ್ ಮತ್ತು ಇರಾನ್ ತಮ್ಮ ಅಂತಿಮ ಕಾರ್ಯಾಚರಣೆಗಳನ್ನು ಮುಗಿಸಿದ ನಂತರ, ಸುಮಾರು 6 ಗಂಟೆಗಳಲ್ಲಿ ಕದನ ವಿರಾಮ ಪ್ರಾರಂಭವಾಗುತ್ತದೆ. 12 ಗಂಟೆಗಳ ಕಾಲ ಇದು ನಡೆಯುತ್ತದೆ. ನಂತರ ಯುದ್ಧವು ಮುಕ್ತಾಯ ವಾಗುತ್ತದೆ. ಇರಾನ್ ಮೊದಲು ಕದನ ವಿರಾಮವನ್ನು ಪ್ರಾರಂಭಿಸುತ್ತದೆ. 12 ಗಂಟೆಗಳ ನಂತರ ಇಸ್ರೇಲ್ ಕದನ ವಿರಾಮವನ್ನು ಪ್ರಾರಂಭಿಸುತ್ತದೆ. 24 ಗಂಟೆಗಳ ನಂತರ, 12 ದಿನಗಳ ಯುದ್ಧವು ಅಧಿಕೃತವಾಗಿ ಕೊನೆಗೊಳ್ಳುತ್ತದೆ. ಜಗತ್ತು ಇದನ್ನು ಸ್ವಾಗತಿಸುತ್ತದೆ. ಪ್ರತಿ ಕದನ ವಿರಾಮದ ಸಮಯದಲ್ಲಿ, ಎರಡೂ ಕಡೆಯ ವರು ಶಾಂತವಾಗಿ ಮತ್ತು ಗೌರವದಿಂದ ಇರುತ್ತಾರೆ' ಎಂದು ತಿಳಿಸಿದ್ದಾರೆ.

ಕದನ ವಿರಾಮ ಘೋಷಣೆಗೂ ಮುನ್ನ ದಾಳಿ: ಮಂಗಳವಾರ ಮುಂಜಾನೆ ಇಸ್ರೇಲ್ ಗುರಿಯಾಗಿಸಿ ಇರಾನ್ ನಡೆಸಿದ ಅಂತಿಮ ಕ್ಷಿಪಣಿ ದಾಳಿಯಲ್ಲಿ ನಾಲ್ವರು ಸಾವನ್ನಪ್ಪಿದ್ದರೆ, ಇಸ್ರೇಲ್ ಬೆಳಗಾಗುವ ಮುನ್ನಾವೇ ಇರಾನ್‌ನಾದ್ಯಂತ ಅನೇಕ ಕಟ್ಟಡಗಳನ್ನು ಗುರಿಯಾಗಿಸಿ ವೈಮಾನಿಕ ದಾಳಿ ನಡೆಸಿತ್ತು. ಈ ದಾಳಿಯಲ್ಲಿ ಆಸ್ಪತ್ರೆಯ ಕಟ್ಟಡವೊಂದಕ್ಕೆ ತೀವ್ರ ಹಾನಿಯಾಗಿದ್ದು, 9 ಮಂದಿ ಸಾವನ್ನಪ್ಪಿದ್ದಾರೆ. ನಂತರ ಉಭಯ ರಾಷ್ಟ್ರಗಳು ಕದನ ವಿರಾಮ ಒಪ್ಪಂದವನ್ನು ಒಪ್ಪಿಕೊಂಡಿವೆ ಎಂದು ವರದಿಯಾಗಿತ್ತು. ಇದಾದ ಕೆಲವೇ ಗಂಟೆಗಳಲ್ಲಿ 'ಇರಾನ್‌ನಿಂದ ಇಸ್ರೇಲ್ ಕಡೆಗೆ ಕ್ಷಿಪಣಿ ಉಡಾವಣೆಯನ್ನು ಪತ್ತೆಹಚ್ಚಲಾಗಿದೆ.

ಯುದ್ಧ ವಿರಾಮ ಘೋಷಣೆಯ ಬೆನ್ನಲ್ಲೇ ಇರಾನ್ ಅದನ್ನು ಉಲ್ಲಂಘಿಸಿದೆ ಎಂದು ಇಸ್ರೇಲ್ ಆರೋಪಿಸಿದ್ದು, ಮರು ಯುದ್ಧಕ್ಕೆ ಮುಂದಾಗಿದೆ. 'ಇಸ್ರೇಲ್ ಜತೆಗಿನ ಕದನ ವಿರಾಮ ಉಲ್ಲಂಘನೆಗೆ ಇರಾನ್‌ಗೆ ಬಲವಾಗಿ ಪ್ರತಿಕ್ರಿಯಿಸಿ' ಎಂದು ಇಸ್ರೇಲ್ ಸೇನೆಗೆ ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ಮಂಗಳವಾರ ಆದೇಶಿಸಿದ್ದಾರೆ. ಇರಾನ್‌ನ ಕದನ ವಿರಾಮ ಉಲ್ಲಂಘನೆಗೆ ಪ್ರತೀಕಾರ ತೀರಿಸಿಕೊಳ್ಳುವುದಾಗಿ ಇಸ್ರೇಲ್ ಭರವಸೆ ನೀಡುತ್ತಿದ್ದಂತೆ, ಇರಾನ್ ಸೇನೆ ಇಸ್ರೇಲ್ ಮೇಲೆ ಕ್ಷಿಪಣಿಗಳನ್ನು ಹಾರಿಸಿರುವುದನ್ನು ನಿರಾಕರಿಸಿದೆ.

ಇರಾನ್ ದಾಳಿಯಿಂದಾಗಿ ಇಸ್ರೇಲ್‌ನಲ್ಲಿ ಹಾನಿಗೊಳಗಾದ ಕಟ್ಟಡ.

ಟ್ರಂಪ್ ಅವರ ಸಮನ್ವಯದೊಂದಿಗೆ ಇಸ್ರೇಲ್ ಇರಾನ್‌ನೊಂದಿಗೆ ದ್ವಿಪಕ್ಷೀಯ ಕದನ ವಿರಾಮಕ್ಕೆ ಒಪ್ಪಿಕೊಂಡಿದೆ. ಇರಾನ್‌ನ ಮಿಲಿಟರಿ ನಾಯಕತ್ವ ಮತ್ತು ಹಲವಾರು ಸರಕಾರಿ ತಾಣಗಳನ್ನು ಇಸ್ರೇಲ್ ಹಾನಿಗೊಳಿಸಿದೆ. ಟೆಹರಾನ್‌ನ ವಾಯುಪ್ರದೇಶದ ಮೇಲೆ ನಿಯಂತ್ರಣ ಸಾಧಿಸಿದೆ. ಕದನ ವಿರಾಮದ ಯಾವುದೇ ಉಲ್ಲಂಘನೆಗೆ ಇಸ್ರೇಲ್ ಬಲವಾಗಿ ಪ್ರತಿಕ್ರಿಯಿಸಲಿದೆ.

ಬೆಂಜಮಿನ್ ನೆತನ್ಯಾಹು
ಇಸ್ರೇಲ್ ಪ್ರಧಾನಿ

ಇಸ್ರೇಲ್ ಮತ್ತು ಇರಾನ್ ಉಭಯ ದೇಶಗಳು ಈ ಯುದ್ಧವನ್ನು ಕೊನೆಗೊಳಿಸಲು ಧೈರ್ಯ ಮತ್ತು ಬುದ್ಧಿವಂತಿಕೆ ತೋರಿಸಿವೆ. ದೇವರು ಇಸ್ರೇಲ್ ಅನ್ನು ಆಶೀರ್ವದಿಸಲಿ, ದೇವರು ಇರಾನ್ ಅನ್ನು ಆಶೀರ್ವದಿಸಲಿ, ದೇವರು ಮಧ್ಯಪ್ರಾಚ್ಯವನ್ನು ಆಶೀರ್ವದಿಸಲಿ, ದೇವರು ಅಮೆರಿಕವನ್ನು ಆಶೀರ್ವದಿಸಲಿ, ದೇವರು ಇಡೀ ಜಗತ್ತನ್ನು ಆಶೀರ್ವದಿಸಲಿ.

ಡೊನಾಲ್ಡ್ ಟ್ರಂಪ್
ಅಮೆರಿಕ ಅಧ್ಯಕ್ಷ



ಇಸ್ರೇಲ್ ಜತೆಗೆ ಯಾವುದೇ ಕದನ ವಿರಾಮ ಏರ್ಪಟ್ಟಿಲ್ಲ. ಇಸ್ರೇಲ್ ದಾಳಿ ನಿಲ್ಲಿಸಿದ ಕೂಡಲೇ ನಾವು ನಿಲ್ಲಿಸುತ್ತೇವೆ. ಯುದ್ಧ ಪ್ರಾರಂಭಿಸಿದ್ದು ಇಸ್ರೇಲ್, ನಾವಲ್ಲ. ಇರಾನ್ ವಿರುದ್ಧದ ಆಕ್ರಮಣವನ್ನು ಇಸ್ರೇಲ್ ಆಡಳಿತ ನಿಲ್ಲಿಸಿದರೆ ಬೆಳಗ್ಗೆ 4 ಗಂಟೆಯ ನಂತರ ನಮ್ಮ ಕಾರ್ಯಾಚರಣೆ ಮುಂದುವರಿಸುವ ಉದ್ದೇಶ ಇಲ್ಲ.

ಅಬ್ಬಾಸ್ ಅರಾಗ್ಚಿ
ಇರಾನ್ ವಿದೇಶಾಂಗ ಸಚಿವ

ಏರ್ ಇಂಡಿಯಾ ಹಾರಾಟ ಆರಂಭ



ಮಧ್ಯಪ್ರಾಚ್ಯ ಮಂಗಳವಾರದಿಂದ ಹಂತ ಹಂತವಾಗಿ ವಿಮಾನ ಹಾರಾಟವನ್ನು ಆರಂಭಿಸಲಾಗುವುದು ಎಂದು ಏರ್ ಇಂಡಿಯಾ ಹೇಳಿದೆ. ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ಉದ್ವಿಗ್ನತೆ ಹೆಚ್ಚಿದ್ದ ಕಾರಣ ವಿಮಾನ ಹಾರಾಟವನ್ನು ಸ್ಥಗಿತಗೊಳಿಸುವುದಾಗಿ ಘೋಷಿಸಿದ ಒಂದು ದಿನದ ನಂತರ ಈ ಪ್ರಕಟಣೆ ಹೊರಡಿಸಿದೆ. ಮಂಗಳವಾರ ಮಸ್ಕತ್, ರಿಯಾದ್, ಜೆಡ್ಡಾ ಸೇರಿ ವಿವಿಧ ನಗರಗಳಿಗೆ ವಿಮಾನ ಸಂಚಾರ ಪ್ರಾರಂಭಿಸಿರುವುದಾಗಿ ಹೇಳಿದೆ.

2,295 ಭಾರತೀಯರ ಸ್ಥಳಾಂತರ

ಇಸ್ರೇಲ್‌ನಲ್ಲಿ ಸಿಲುಕಿದ್ದ 443 ಭಾರತೀಯ ನಾಗರಿಕರನ್ನೊಳಗೊಂಡ 2ನೇ ಬ್ಯಾಚ್ ಅನ್ನು ಸ್ಥಳಾಂತರಿಸಲಾಗಿದೆ. ಇವರನ್ನು 175 ಮತ್ತು 268 ಜನರುಳ್ಳ 2 ತಂಡಗಳನ್ನಾಗಿ ವಿಭಾಗಿಸಲಾಗಿದ್ದು, ಜೋರ್ಡಾನ್ ಮತ್ತು ಈಜಿಪ್ಟ್‌ಗಳಿಗೆ ಸ್ಥಳಾಂತರಿಸಲಾಗಿದೆ. ಈ ಮೂಲಕ ಕಳೆದೆರೆಡು ದಿನಗಳಲ್ಲಿ 603 ಭಾರತೀಯರನ್ನು ಇಸ್ರೇಲ್‌ನಿಂದ ಸ್ಥಳಾಂತರಿಸಿದಂತಾಗಿದೆ. ಇರಾನ್ ಮತ್ತು ಇಸ್ರೇಲ್‌ನಿಂದ ಈವರೆಗೂ 2295 ಭಾರತೀಯರನ್ನು ಸ್ಥಳಾಂತರ ಮಾಡಲಾಗಿದೆ.

ಬಿಕ್ಕಟ್ಟು ಶಮನಕ್ಕೆ ಭಾರತ ಸಿದ್ಧ

ಹೊಸದಿಲ್ಲಿ: ಮಾತುಕತೆ ಮತ್ತು ರಾಜತಾಂತ್ರಿಕ ಮಾರ್ಗದ ಮೂಲಕ ಪಶ್ಚಿಮ ಏಷ್ಯಾದ ಬಿಕ್ಕಟ್ಟು ಶಮನಕ್ಕೆ ಭಾರತವು ತನ್ನ ಪಾತ್ರ ನಿರ್ವಹಿಸಲು ಸಿದ್ಧವಿದೆ ಎಂದು ಭಾರತ ಮಂಗಳವಾರ ಹೇಳಿದೆ ಇರಾನ್ -ಇಸ್ರೇಲ್ ನಡುವಿನ ಕದನ ವಿರಾಮದ ಬಗ್ಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಹೇಳಿಕೆ ನೀಡಿದ ಬೆನ್ನಲ್ಲೇ ಭಾರತದ ವಿದೇಶಾಂಗ ಸಚಿವಾಲಯ ಪ್ರತಿಕ್ರಿಯಿಸಿದೆ. ಈ ಪ್ರದೇಶದಲ್ಲಿನ ಸಂಘರ್ಷಗಳನ್ನು ಪರಿಹರಿಸಲು ಮಾತುಕತೆ ಮತ್ತು ರಾಜತಾಂತ್ರಿಕತೆ ಸೂತ್ರವಾಗಿದೆಯೇ ಹೊರತು ಪರ್ಯಾಯ ಆಯ್ಕೆಯಿಲ್ಲ ಎಂದು ಪುನರುಚ್ಚರಿಸಲು ಬಯಸುತ್ತೇವೆ. ಈ ಪ್ರಯತ್ನಕ್ಕೆ ಸಹಾಯ ಮಾಡಲು ಭಾರತ ಸಿದ್ಧವಿದೆ. ಅಲ್ಲದೆ ಶಾಂತಿ ಮತ್ತು ಸ್ಥಿರತೆಯನ್ನು ಸ್ಥಾಪಿಸಲು ಎಲ್ಲಾ ದೇಶಗಳು ಒಟ್ಟಾಗಿ ಕೆಲಸ ಮಾಡಲಿವೆ ಎನ್ನುವ ಭರವಸೆಯಿದೆ ಎಂದು ಸಚಿವಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

ರಾಜ್ಯದ 7 ಪ್ರಮುಖ ಮಸೂದೆಗಳಿಗೆ ಅಂಗೀಕಾರ ಕೋರಿದ ಸಿದ್ದರಾಮಯ್ಯ

ಬಿಲ್ ಪಾಸ್‌ಗೆ ಸಿಎಂ ಮನವಿ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು/ದೆಹಲಿ

ದೆಹಲಿ ಪ್ರವಾಸದಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಷ್ಟ್ರಪತಿಗಳ ಮುಂದಿರುವ ವಿಧೇಯಕಗಳಿಗೆ ಸಹಿ ಹಾಕುವಂತೆ ಮನವಿ ಮಾಡುವ ಜತೆಜತೆಗೆ ಸರಕಾರ-ರಾಜಭವನ ನಡುವಿನ ಸಂಘರ್ಷದ ಬಗ್ಗೆಯೂ ಪ್ರಸ್ತಾಪಿಸಿದ್ದಾರೆ.

ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಮಂಗಳವಾರ ಭೇಟಿಯಾದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಾಜ್ಯಪಾಲರಿಂದ ರಾಷ್ಟ್ರಪತಿಗಳಿಗೆ ರವಾನೆಯಾಗಿರುವ ಏಳು ವಿಧೇಯಕಗಳಿಗೆ ಶೀಘ್ರವೇ ಸಹಿ ಹಾಕುವಂತೆ ಮನವಿ ಮಾಡಿದರು. ರಾಜ್ಯಸರಕಾರ ವಿಧಾನಮಂಡಲದಲ್ಲಿ ಅಂಗೀಕರಿಸಿ ರಾಜಭವನಕ್ಕೆ ಕಳುಹಿಸಿದ ಬಹುತೇಕ ವಿಧೇಯಕಗಳು ನನೆಗುದಿಗೆ ಬೀಳುತ್ತಿವೆ. → 4

ಖರ್ಗೆ ಸುರ್ಜೇವಾಲ ಜತೆ ಚರ್ಚೆ → 4

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾದರು.

ಪಿಎಂ ಭೇಟಿಗೆ ಸಿಗದ ಸಮಯ

ಪ್ರಧಾನಿ ಮೋದಿ ಅವರನ್ನು ಸಿದ್ದರಾಮಯ್ಯ ಅವರು ಭೇಟಿಯಾಗಲಿದ್ದಾರೆ ಎನ್ನಲಾಗಿತ್ತು. ಆದರೆ ಪಿಎಂ ಕಚೇರಿಯಿಂದ ಯಾವುದೇ ಸಕಾರಾತ್ಮಕ ಸ್ಪಂದನೆ ಬಾರದಿರುವುದರಿಂದ, ಬುಧವಾರ ಮೋದಿ ಅವರನ್ನು ಭೇಟಿಯಾಗುವುದಿಲ್ಲ ಎಂದು ತಿಳಿದುಬಂದಿದೆ.

- ರಾಷ್ಟ್ರಪತಿಗಳ ಮುಂದಿರುವ ಬಿಲ್‌ಗಳಿಗೆ ಸಹಿ ಹಾಕಲು ಮನವಿ
- ರಾಜ್ಯ ರಾಜಕೀಯಕ್ಕೆ ಸಂಬಂಧಿಸಿ ಸುರ್ಜೇವಾಲ ಜತೆ ಚರ್ಚೆ
- ದೆಹಲಿಯಲ್ಲಿ ಮ್ಯಾರಥಾನ್ ಸಭೆಗಳನ್ನು ಮಾಡಿದ ಸಿಎಂ

ಲಂಚ ಪಡೆದಿದ್ದೇನೆ ಎಂಬ ಆರೋಪ ಸಾಬೀತಾದರೆ ರಾಜೀನಾಮೆ ನೀಡುವೆ

ಸಿಬಿಐ ತನಿಖೆಗೆ ಸಿದ್ಧ: ಜಮೀರ್

ಬೆಂಗಳೂರು: ರಾಜ್ಯ ರಾಜಕೀಯದಲ್ಲಿ ತೀವ್ರ ವಿವಾದಕ್ಕೆ ಕಾರಣವಾಗಿರುವ ವಸತಿ ಇಲಾಖೆಯಲ್ಲಿನ ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ವಸತಿ ಸಚಿವ ಜಮೀರ್ ಅಹ್ಮದ್ ಕೊನೆಗೂ ಮೌನ ಮುರಿದಿದ್ದು, ನಾನು ಲಂಚ ಪಡೆದಿರುವುದು ಸಾಬೀತುಪಡಿಸಿದರೆ ರಾಜೀನಾಮೆ ನೀಡಲು ಸಿದ್ಧ ಎಂದು ಸವಾಲು ಹಾಕಿದ್ದಾರೆ.

ಈ ನಡುವೆಯೇ ಕಾಂಗ್ರೆಸ್ ಶಾಸಕರು ಅನುದಾನ ಕೊರತೆ ಹಾಗೂ ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ತಮ್ಮ ಹೇಳಿಕೆಯನ್ನು ಪುನರುಚ್ಚರಿಸಿದ್ದಾರೆ. → 4

ಮುಗಿಯದ ಗೊಂದಲ

ಈ ಎಲ್ಲ ಪ್ರಹಸನದ ನಡುವೆಯೂ ಅನುದಾನ ತಾರತಮ್ಯಕ್ಕೆ ಹಾಗೂ ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ಮಂಗಳವಾರವೂ ಕೆಲ ಶಾಸಕರು ಆಕ್ರೋಶ ಹೊರಹಾಕಿದ್ದಾರೆ. ಶಾಸಕ ಬಿ.ಆರ್.ಪಾಟೀಲ್ ಮಾತನಾಡಿ, ವಿವಿಧ ಜಿಲ್ಲೆಗಳಿಂದ ಜನರು ಕರೆ ಮಾಡಿ ದೂರು ನೀಡುತ್ತಿದ್ದಾರೆ. ಹಂಪಿ ವಿವಿಗೆ ಬಂದಿದ್ದ ವೇಳೆಯೂ ವಸತಿ ನಿಗಮದ ಅಕ್ರಮದ ಕುರಿತು ಫೋನ್‌ನಲ್ಲಿ ಮಾತನಾಡುತ್ತಿದ್ದಾರೆ. ಸರಕಾರ ನಮ್ಮ ನಡುವಿನದ್ದು, ಗಂಡ ಹೆಂಡತಿ ಜಗಳ. ಬುಧವಾರ ಸಿಎಂ, ಡಿಸಿಎಂ ಭೇಟಿಗೆ ಹೋಗುತ್ತೇನೆ, ಮಾಧ್ಯಮಗಳ ಮುಂದೆ ಹೇಳಿದ್ದನ್ನೇ ಸಿಎಂ ಮುಂದೆ ಹೇಳುತ್ತೇನೆ ಎಂದರು.

ಶಾಸಕ ಬಿ.ಆರ್.ಪಾಟೀಲ್, ಸಚಿವ ಜಮೀರ್ ವಿರುದ್ಧ ನೇರವಾಗಿ ಆರೋಪ ಮಾಡಿಲ್ಲ. ಸಚಿವರ ಕಚೇರಿಯಲ್ಲಿ ಲಂಚ ಕೇಳಿದರೆ ಅದರ ಬಗ್ಗೆ ತನಿಖೆಯಾಗಬೇಕು. ಆದರೆ ಈ ಕಾರಣಕ್ಕೆ ಜಮೀರ್ ರಾಜೀನಾಮೆ ಪಡೆಯುವುದು ಸರಿಯಲ್ಲ. ಶಾಸಕರ ಸಂಕಷ್ಟಗಳು ನಮಗೆ ಅರ್ಥವಾಗುತ್ತವೆ. ಶಾಸಕರಲ್ಲಿ ಸಣ್ಣಪುಟ್ಟ ಅತೃಪ್ತಿ, ಅಸಮಾಧಾನಗಳಿವೆ. ಆದರೆ ಅದು ತೀವ್ರ ಸ್ವರೂಪದಲ್ಲಿಲ್ಲ.

-ಬಸವರಾಜ ರಾಯರಡ್ಡಿ ಸಿಎಂ ಆರ್ಥಿಕ ಸಲಹೆಗಾರ

ಇಂದು ಶುಭಾಂಶು ಅಂತರಿಕ್ಷಯಾನ

ಬೆಂಗಳೂರು: ಭಾರತದ ಬಾಹ್ಯಾಕಾಶ ಯಾನದಲ್ಲಿ ಒಂದು ದೊಡ್ಡ ಮತ್ತು ಐತಿಹಾಸಿಕ ದಿನ ಕೊನೆಗೂ ಹತ್ತಿರ ಬಂದಿದ್ದು, ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ಅವರು ಬುಧವಾರ ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ತೆರಳಲಿದ್ದಾರೆ. ತಾಂತ್ರಿಕ ತೊಂದರೆಗಳ ಕಾರಣಕ್ಕೆ ಈಗಾಗಲೇ ಹಲವು ಬಾರಿ ಮುಂದೂಡಲ್ಪಟ್ಟಿದ್ದ



ಆಕ್ಸಿಯಮ್-4 ಬಾಹ್ಯಾಕಾಶ ಕಾರ್ಯಾಚರಣೆಯನ್ನು ಎಲ್ಲ ತಾಂತ್ರಿಕ ದೋಷಗಳನ್ನು ನಿವಾರಣೆ ಮಾಡಿದ ಬಳಿಕ ಕಾರ್ಯಾಚರಣೆಗೆ ಸಿದ್ಧಪಡಿಸಲಾಗಿದ್ದು, ಬುಧವಾರ ಯೋಜನೆಯನ್ನು ಕಾರ್ಯರೂಪಕ್ಕೆ ತರಲಾಗುವುದು. ಆ್ಯಕ್ಸಿಯಂ-4 ಮಿಷನ್ ಜೂನ್ 25 ರಂದು ಬೆಳಗಿನ ಜಾವ 2:31ಕ್ಕೆ ಫ್ಲೋರಿಡಾದಲ್ಲಿರುವ ನಾಸಾದ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ಸ್ಪೇಸ್‌ಎಕ್ಸ್‌ನ ಫಾಲ್ಕನ್ 9 ರಾಕೆಟ್ ಹಾರಾಟ ನಡೆಸಲಿದೆ ಎಂದು ಎಂದು ನಾಸಾ ಪ್ರಕಟಣೆಯಲ್ಲಿ ತಿಳಿಸಿದೆ.

ಹೆಬ್ಬಾಳ-ಸಿಲ್ಕ್ ಬೋರ್ಡ್ ಸುರಂಗ ರಸ್ತೆಗೆ 2 ದಿನಗಳಲ್ಲಿ ಟೆಂಡರ್

120 ಅಡಿ ಆಳದಲ್ಲಿ ಸುರಂಗ ಮಾರ್ಗ

ಬೆಂಗಳೂರು: ನಗರದ ಸೆಂಟ್ರಲ್ ಸಿಲ್ಕ್ ಬೋರ್ಡ್ ಮತ್ತು ಹೆಬ್ಬಾಳ ನಡುವಿನ 16.68 ಕಿ.ಮೀ ಸುರಂಗ ಮಾರ್ಗವನ್ನು ನೆಲದಿಂದ 120 ಅಡಿ ಕೆಳಗೆ ನಿರ್ಮಿಸಲಾಗುತ್ತಿದ್ದು, ಒಂದೆರಡು ದಿನಗಳಲ್ಲಿ ಟೆಂಡರ್ ಕರೆಯಲಾಗುವುದು ಎಂದು ಬಿ-ಸ್ಮೈಲ್ ನಿರ್ದೇಶಕ ಬಿ.ಎಸ್.ಪ್ರಹ್ಲಾದ್ ತಿಳಿಸಿದರು.

ಈ ಕಾಮಗಾರಿಗಾಗಿ ಸುಧಾರಿತ ಸುರಂಗ ಬೋರಿಂಗ್ ಯಂತ್ರಗಳನ್ನು ಬಳಸಲಾಗುವುದು. ರಸ್ತೆಯ ಟೋಲ್ ಅನ್ನು ಪ್ರತಿ ಕಿ.ಮೀ ಗೆ 19 ರು. ಎಂದು ನಿಗದಿಪಡಿಸಲಾಗಿದೆ. ಯೋಜನಾ ವೆಚ್ಚದಿಂದಾಗಿ ಟೋಲ್ ಬದಲಾಗ ಬಹುದು. ಕಾಮಗಾರಿ ನಾಲ್ಕು ವರ್ಷಗಳಲ್ಲಿ ಪೂರ್ಣಗೊಳ್ಳುವ ನಿರೀಕ್ಷೆಯಿದೆ. ಆದರೆ ಎಲ್ಲವೂ ಭೌಗೋಳಿಕ ಅಂಶಗಳನ್ನು ಅವಲಂಬಿ ಸಿರುತ್ತದೆ. ಮನೆಗಳು ಮತ್ತು ಇತರ ಕಟ್ಟಡಗಳು ಸುರಕ್ಷಿತವಾಗಿರುತ್ತವೆ ಎಂದು ಹೇಳಿದರು.

ಸುರಂಗ ಮಾರ್ಗದಿಂದ ಅಂತರ್ಜಲ ಪೂರೈಕೆ ಮತ್ತು ಬೋರ್ ವೆಲ್ ಪಾಯಿಂಟ್‌ಗಳ ಮೇಲೆ ಪರಿಣಾಮ ಬೀರುವ ಬಗ್ಗೆ, ಸರಕಾರವು ಮಾಲೀಕರಿಗೆ ಬೋರ್‌ವೆಲ್‌ಗಳನ್ನು ಕೊರೆಸಲು ಅನುಮತಿ ನೀಡಿದೆ. ಅದೂ ಸರಕಾರಕ್ಕೆ ಸೇರಿರುವುದರಿಂದ ಅವರಿಗೆ ಅದರ ಮೇಲೆ ಹಕ್ಕಿದೆ ಎಂದು ಅರ್ಥವಲ್ಲ. ಕೆಲವು ಬೋರ್ ವೆಲ್ ಪಾಯಿಂಟ್‌ಗಳು ಪರಿಣಾಮ ಬೀರ ಬಹುದು ಎಂದರು.

ಎರಡು ಪ್ಯಾಕೇಜ್‌ಗಳಲ್ಲಿ ಟೆಂಡರ್‌ಗಳನ್ನು ಕರೆಯಲಾಗುವುದು, ಸಂಬಂಧಿತ ದಾಖಲೆಗಳು ಈಗಾಗಲೇ ಹಣಕಾಸು ಇಲಾಖೆಗೆ ಕಳುಹಿಸಲಾಗಿದೆ. ಸರಕಾರ ಜೂನ್ 9 ರಂದು ಅನುಮೋದನೆ ನೀಡಿ ಇನ್ನು ಕೆಲವೇ ದಿನಗಳಲ್ಲಿ ಟೆಂಡರ್ ಆರಂಭವಾಗಲಿದೆ. ಯೋಜನೆಯ ವೆಚ್ಚವು 42,000 ಕೋಟಿ ರು ಎಂದು ಅಂದಾಜಿಸಲಾಗಿದೆ, ಇದರಲ್ಲಿ ಭೂ ಸ್ವಾಧೀನಕ್ಕೆ 800 ಕೋಟಿ ರು.ಗಳು ಸೇರಿವೆ.

-ಬಿ.ಎಸ್.ಪ್ರಹ್ಲಾದ್, ಬಿ-ಸ್ಮೈಲ್ ನಿರ್ದೇಶಕ

ಸೊಂಪಾದ ಪುಟಗಳು

ಭೂಲೋಕದ ದೇವತೆಗಳೋ, ಯಮನ ಸೋದರರೋ?
ಹಿಂದಿರುಗಿ ನೋಡಿದಾಗ
ಡಾ. ನಾ.ಸೋಮೇಶ್ವರ 6

ತುರ್ತು ಪರಿಸ್ಥಿತಿಯಲ್ಲಿ ಹೇಗಿತ್ತು ಪತ್ರಿಕಾ ಪ್ರಪಂಚ?
ಸಿಂಹಾವಲೋಕನ
ದು.ಗು.ಲಕ್ಷ್ಮಣ 7

ದಾರಿದೀಪೋಕ್ತಿ



ಈ ದಿನ ಎಂಥದ್ದು ಅಂದರೆ ನೀವು ಬಯಸಿದ ನಾಳೆಗಳನ್ನು ಕಟ್ಟುವ ಅಮಿತ ಅವಕಾಶವನ್ನು ತೆರೆದಿಡುವ ಅಪೂರ್ವ ಅವಕಾಶ. ಈ ದಿನ ನೀವು ಏನನ್ನೂ ಮಾಡದಿದ್ದರೆ, ನಾಳೆಯಲ್ಲಿ ಯಾವ ವಿಶೇಷಗಳೂ ಇರುವುದಿಲ್ಲ. ಆ ಕಾರಣದಿಂದ ಇಂದಿನ ದಿನವನ್ನು ಸಾರ್ಥಕವಾಗಿ ಕಳೆಯಬೇಕು.

ವಕ್ರತುಂಡೋಕ್ತಿ

ಇತ್ತೀಚಿನ ದಿನಗಳಲ್ಲಿ ನೀವು ಯಾವ ಒಳ್ಳೆಯ ಕೆಲಸವನ್ನೂ ಮಾಡದೇ ನಿಷ್ಪ್ರಯೋಜಕವಾಗಿ ದಿನಗಳನ್ನು ಕಳೆಯುತ್ತಿದ್ದೇನೆ ಎಂದು ಅನಿಸಿ ಬೇಸರ ಮಾಡಿಕೊಳ್ಳುವ ಮುನ್ನ ವಿಶ್ವಸಂಸ್ಥೆ ಏನು ಮಾಡುತ್ತಿದೆಯೆಂದು ಯೋಚಿಸಿ. ನಿಮಗೆ ನಿಮ್ಮ ಸಾಧನೆ ಬಗ್ಗೆ ಹೆಮ್ಮೆಯೆನಿಸುತ್ತದೆ.

ಬ್ಲ್ಯಾಕ್‌ಬಾಕ್ಸ್ ವಿದೇಶಕ್ಕೆ ಕಳಿಸಿಲ್ಲ

ಪುಣೆ: ಜೂನ್ 12ರಂದು ಗುಜರಾತ್‌ನ ಅಹಮದಾಬಾದ್‌ನಲ್ಲಿ ಪತನಗೊಂಡ ಏರ್ ಇಂಡಿಯಾ ಬೋಯಿಂಗ್ 787-8 ವಿಮಾನದ ಬ್ಲ್ಯಾಕ್ ಬಾಕ್ಸ್‌ಗಳನ್ನು ವಿಮಾನ ಅಪಘಾತ ತನಿಖಾ ಸಂಸ್ಥೆಯು (ಎಎಐಬಿ) ಪರಿಶೀಲಿಸುತ್ತಿದೆ ಎಂದು ಕೇಂದ್ರ ನಾಗರಿಕ ವಿಮಾನ ಯಾನ ಸಚಿವ ರಾಮ್ ಮೋಹನ್ ನಾಯ್ಡು ಹೇಳಿದ್ದಾರೆ. ಬ್ಲ್ಯಾಕ್‌ಬಾಕ್ಸ್‌ಗಳನ್ನು ವಿಶ್ಲೇಷಣೆಗಾಗಿ ವಿದೇಶಕ್ಕೆ ಕಳುಹಿಸಲಾಗುತ್ತಿದೆ ಎಂಬ ವರದಿ ಗಳನ್ನು ತಳ್ಳಿ ಹಾಕಿದ್ದಾರೆ. ಸದ್ಯ ಬ್ಲ್ಯಾಕ್‌ಬಾಕ್ಸ್‌ಗಳು ಭಾರತದಲ್ಲೇ ಇವೆ ಮತ್ತು ವಿಮಾನ ಅಪಘಾತ ತನಿಖಾ ಸಂಸ್ಥೆಯೇ ತನಿಖೆ ನಡೆಸುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಫನ್‌ತರಂಗ

- ರಘುಪತಿ ಶೃಂಗೇರಿ -

ರಾಜ್ಯ ಸರ್ಕಾರದ ವಿರುದ್ಧವೇ ಆಕ್ರೋಶ ಹೊರಹಾಕುತ್ತಿರುವ ಶಾಸಕರು — ಸುದ್ದಿ



ಸಮಾಚಾರ ಸಣ್ಣದಲ್ಲ

11 ಮಂದಿ ವಿರುದ್ಧ ಎಫ್‌ಐಆರ್

ಬೆಂಗಳೂರು: ಬೈಕ್ ಟ್ಯಾಕ್ಸಿ ಸೇವೆ ರದ್ದುಗೊಳಿಸುವ ಬದಲು ಸೂಕ್ತ ನಿಯಮ ರೂಪಿಸಬೇಕೆಂದು ಒತ್ತಾಯಿಸಿ ವಿಧಾನಸೌಧದ ಠಾಣೆ ಮುಂದೆ ಪ್ರತಿಭಟನೆ ನಡೆಸಿದ್ದ 11 ಮಂದಿ ಪ್ರತಿಭಟನಾಕಾರರ ವಿರುದ್ಧ ಪ್ರಕರಣ ದಾಖಲಾಗಿದೆ. ವಿಧಾನಸೌಧದ ಮುಂದೆ ಯಾವುದೇ ಪ್ರತಿಭಟನೆ ನಡೆಸುವುದು ಹಾಗೂ ಗುಂಪು ಸೇರುವುದು ಕಾನೂನುಬಾಹಿರ. ಹೀಗಿದ್ದರೂ ಯಾವುದೇ ಮಾಹಿತಿ ನೀಡದೆ ವಿವೇಕ್, ಮೈಸೂರು ಹಾಗೂ ಹಾಸನ ಸೇರಿದಂತೆ ವಿವಿಧ ಕಡೆಗಳಿಂದ ಬೈಕ್ ಟ್ಯಾಕ್ಸಿ ಸವಾರರು ಜೂನ್ 21ರಂದು ಬಂದು ಗುಂಪುಗೂಡಿ ಸರಕಾರದ ವಿರುದ್ಧ ತಮ್ಮ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿದ್ದರು. ಈ ಸಂಬಂಧ ಸ್ವಯಂಪ್ರೇರಿತವಾಗಿ ವಿಧಾನಸೌಧದ ಪೊಲೀಸರು 11 ಮಂದಿ ಪ್ರತಿಭಟನಾಕಾರರ ವಿರುದ್ಧ ಪ್ರಕರಣ ದಾಖಲಿಸಿಕೊಂಡಿದ್ದಾರೆ. ರಾಜ್ಯದಲ್ಲಿ ಜೂನ್ 16 ರಿಂದಲೇ ಬೈಕ್ ಟ್ಯಾಕ್ಸಿ ಸೇವೆಗಳ ನಿಷೇಧ ಅಧಿಕೃತವಾಗಿ ಜಾರಿಯಾಗಿದೆ. ಬೈಕ್ ಟ್ಯಾಕ್ಸಿ ಸೇವೆ ನಿಂತಲ್ಲೇ ಗ್ರೇಡ್ ಲೈನ್ಸ್ ಜಾರಿಯಾಗುವವರೆಗೂ ಸೇವೆಗಳನ್ನು ಸ್ಥಗಿತಗೊಳಿಸುವ ರಾಜ್ಯ ಸರಕಾರದ ಆದೇಶವನ್ನು ಇತ್ತೀಚೆಗೆ ಕರ್ನಾಟಕ ಹೈಕೋರ್ಟ್ ಎತ್ತಿ ಹಿಡಿದಿತ್ತು. ಬೈಕ್ ಟ್ಯಾಕ್ಸಿ ಕಂಪನಿಗಳು ಕೋರಿದ್ದ ಆರು ವಾರಗಳ ಕಾಲಾವಕಾಶ ಸಹ ಜೂನ್ 15ಕ್ಕೆ ಮುಕ್ತಾಯಗೊಂಡಿದ್ದು, ಮಧ್ಯಂತರ ಅನುಮತಿಗೂ ನಿರಾಕರಿಸಲಾಗಿತ್ತು. ಆದ್ದರಿಂದ ರ‍್ಯಾಪಿಡೋ, ಉಬರ್ ಮತ್ತಿತರ ಕಂಪನಿಗಳು ಜೂನ್ 16 ರಿಂದಲೇ ತಮ್ಮ ಆ್ಯಪ್‌ಗಳಲ್ಲಿ ಬೈಕ್ ಟ್ಯಾಕ್ಸಿ ಸೇವೆಯ ಆಯ್ಕೆಯನ್ನು ತೆಗೆದು ಹಾಕಿದ್ದವು.

ವಿರಾಮ
ಪ್ರತಿ ಭಾನುವಾರ

ರಾಜ್ಯ, ರಾಷ್ಟ್ರೀಯ ಹೆದ್ದಾರಿಗಳ ಸುಧಾರಣೆ ಕುರಿತು ನಿತಿನ್ ಗಡ್ಕರಿ ಜತೆ ಎಚ್.ಡಿ.ಕುಮಾರಸ್ವಾಮಿ ಚರ್ಚೆ

ಭೂಗತ ರಸ್ತೆಗೆ ಹಸಿರು ನಿಶಾನೆ

ಬೆಂಗಳೂರು: ನಗರದಲ್ಲಿ ಅತ್ಯಾಧುನಿಕ ಭೂಗತ ರಸ್ತೆ ಜಾಲ ನಿರ್ಮಾಣ, ಪೆರಿಫೆರಲ್ ರಿಂಗ್ ರಸ್ತೆ ಅಭಿವೃದ್ಧಿ ಸೇರಿ ರಾಜ್ಯದ ಪ್ರಮುಖ ಸಾರಿಗೆ ಯೋಜನೆಗಳ ಬಗ್ಗೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಕೇಂದ್ರ ಭೂಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರೊಂದಿಗೆ ಮಹತ್ವದ ಮಾತುಕತೆ ನಡೆಸಿದ್ದು, ಕೇಂದ್ರದಿಂದ ಸಕಾರಾತ್ಮಕ ಸ್ಪಂದನೆ ಸಿಕ್ಕಿದೆ.

ದೆಹಲಿಯಲ್ಲಿ ಮಂಗಳವಾರ ಗಡ್ಕರಿ ಅವರ ನಿವಾಸಕ್ಕೆ ತೆರಳಿದ್ದ ಸಚಿವ ಕುಮಾರಸ್ವಾಮಿ, ಮುಖ್ಯವಾಗಿ ಬೆಂಗಳೂರಿಗೆ ಅತ್ಯಗತ್ಯವಾಗಿರುವ ಇವೆರಡೂ ಯೋಜನೆಗಳ ಬಗ್ಗೆ ಹೆದ್ದಾರಿ ಸಚಿವರ ಜತೆ ದೀರ್ಘ ಸಮಾಲೋಚನೆ ನಡೆಸಿದರು. ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವರ ಮನವಿಗೆ ಹೆದ್ದಾರಿ ಸಚಿವರು ಅತ್ಯಂತ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ನಗರದ ಸಂಚಾರ ದಟ್ಟಣೆ ನಿವಾರಿಸುವ ಸಲುವಾಗಿ ಪೆರಿಫೆರಲ್ ರಿಂಗ್ ರಸ್ತೆ ಹಾಗೂ ಅತ್ಯಾಧುನಿಕ ಭೂಗತ ರಸ್ತೆ ಜಾಲ ನಿರ್ಮಾಣಕ್ಕೆ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಕುಮಾರಸ್ವಾಮಿ ಮನವಿ ಮಾಡಿದ್ದಾರೆ.

ಅಲ್ಲದೆ ನಗರದ ಮಧ್ಯಭಾಗದಲ್ಲಿ ಸಂಚಾರ ದಟ್ಟಣೆ ವಿಪರೀತವಾಗಿದೆ. ಇದನ್ನು ಕಡಿಮೆ ಮಾಡಲು ಇವೆರಡೂ ಯೋಜನೆಗಳ ಶಾಶ್ವತ ಪರಿಹಾರ ಆಗಿವೆ. ನಗರದ ಪ್ರಮುಖ ವಲಯಗಳನ್ನು ಸಂಪರ್ಕಿಸುವ ಈ ಯೋಜನೆಗಳು ಅವಶ್ಯಕ. ಈ ಪರಿವರ್ತನಾತ್ಮಕ ಮೂಲಸೌಕರ್ಯವು ಬೆಂಗಳೂರಿನ ಭವಿಷ್ಯದ ಅಭಿವೃದ್ಧಿಗೆ ಬಹಳ ಸಹಕಾರಿ ಆಗಲಿದೆ. ಸುಧಾರಿತ ಮತ್ತು ದೀರ್ಘಕಾಲೀನ ಸುಸ್ಥಿರ ಬೆಳವಣಿಗೆಗೆ ನೆರವಾಗುತ್ತದೆ ಎಂದು ಸಚಿವರು ಹೆದ್ದಾರಿ ಸಚಿವರಿಗೆ ಮನವರಿಕೆ ಮಾಡಿಕೊಟ್ಟಿದ್ದಾರೆ.

ಶಿರಾಡಿ ಘಾಟ್ ರಸ್ತೆ ಯೋಜನೆ ಶೀಘ್ರ ಪೂರ್ಣಗೊಳಿಸಲು ಮನವಿ: ಬೆಂಗಳೂರು ಮತ್ತು ಮಂಗಳೂರು ನಡುವೆ ಸುಗಮ ಸಂಚಾರಕ್ಕೆ ಶಿರಾಡಿ ಘಾಟ್ ರಸ್ತೆ ಯೋಜನೆ ಕಾಮಗಾರಿ ಶೀಘ್ರಗತಿಯಲ್ಲಿ ಪೂರ್ಣಗೊಳಿಸಬೇಕು ಎಂದು ಇದೇ ಸಂದರ್ಭದಲ್ಲಿ ಸಚಿವ ಕುಮಾರಸ್ವಾಮಿ ಅವರು ಗಡ್ಕರಿ ಅವರಲ್ಲಿ ಮನವಿ ಮಾಡಿದರು. ಕಾಮಗಾರಿ ನಿಧಾನವಾಗುತ್ತಿರುವುದರಿಂದ ಎರಡೂ ನಗರಗಳ ನಡುವೆ ವಾಹನ ಸಂಚಾರಕ್ಕೆ ತೀವ್ರ ಸಮಸ್ಯೆ ಆಗಿದೆ. ಸುಗಮ ಸಂಚಾರ ಸಾಧ್ಯವಾಗದೆ ವಾಹನ ಸವಾರರು, ಪ್ರಯಾಣಿಕರು ಸಂಕಷ್ಟ ಅನುಭವಿಸುತ್ತಿದ್ದಾರೆ. ಆದಷ್ಟು ಬೇಗ ಕಾಮಗಾರಿ ಮುಗಿಸಬೇಕು ಎಂದು ಕುಮಾರಸ್ವಾಮಿ ಕೋರಿದ್ದಾರೆ.

ದೆಹಲಿಯಲ್ಲಿ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿ ಮಾಡಿದ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ರಾಜ್ಯದ ರಸ್ತೆ ಅಭಿವೃದ್ಧಿ ವಿಚಾರಗಳ ಕುರಿತು ಚರ್ಚೆ ನಡೆಸಿದರು.

ಚರ್ಚಿಸಲಾದ ಪ್ರಮುಖ ಯೋಜನೆಗಳು

- ಸಂಚಾರ ಮತ್ತು ಸುರಕ್ಷತೆಯ ದೃಷ್ಟಿಯಿಂದ ರಾಷ್ಟ್ರೀಯ ಹೆದ್ದಾರಿ 75 (ಕುಣಿಗಲ್ ವಿಭಾಗ) ಅನ್ನು ಮೇಲ್ದರ್ಜೆಗೇರಿಸುವುದು.
- ಚನ್ನರಾಯಪಟ್ಟಣದಿಂದ ಕುಮುಟಕ್ಕೆ (ರಾಜ್ಯ ಹೆದ್ದಾರಿ ಸಂಖ್ಯೆ 8) ಅನ್ನು ಹೊಸ ರಾಷ್ಟ್ರೀಯ ಹೆದ್ದಾರಿಯನ್ನಾಗಿ ಅಭಿವೃದ್ಧಿ ಮಾಡುವುದು.
- ಜೇವರ್ಗಿಯಿಂದ ಸುರಪುರಕ್ಕೆ ನಾಲ್ಕು ಪಥದ ಹೆದ್ದಾರಿಯಾಗಿ ಮೇಲ್ದರ್ಜೆಗೇರಿಸುವುದು.
- ರಾಷ್ಟ್ರೀಯ ಹೆದ್ದಾರಿ 66 (ಅಂಕೋಲಾ ತಾಲೂಕು)ನ ಶಿರೂರು ಘಾಟ್ ವಿಭಾಗ, ಹಾಸನ-ಸಕಲೇಶಪುರ-ಮಂಗಳೂರು ರಾಷ್ಟ್ರೀಯ ಹೆದ್ದಾರಿ 75ರ ಶಿರಾಡಿ ಘಾಟ್ ವಿಭಾಗ, ಕುಮಟಾ ಬಳಿಯ ಬರ್ಗಿ ಘಾಟ್ ವಿಭಾಗದಲ್ಲಿ ಭೂ ಕುಸಿತ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಒದಗಿಸುವುದು.
- ತುಮಕೂರು ಜಿಲ್ಲೆಯ ಶಿರಾ ತಾಲೂಕಿನ ಕಳ್ಳಂಬೆಳ್ಳ ಹೋಬಳಿಯ ಜೋಗಿಹಳ್ಳಿ ಬಳಿ ಮೇಲು ಸೇತುವೆ ನಿರ್ಮಾಣ.
- ಮಂಡ್ಯ ಜಿಲ್ಲೆಯ ಗೆಜ್ಜಲಗೆರೆ ಗೇಟ್ (ರಾಷ್ಟ್ರೀಯ ಹೆದ್ದಾರಿ 275) ಗೆ ಸಂಪರ್ಕಿಸುವ ರೇಲ್ವೆ ಕ್ರಾಸಿಂಗ್ (ಔಇ-64) ರೈಲ್ವೆ ಓವರ್‌ಬ್ರಿಡ್ಜ್ ನಿರ್ಮಾಣಮಂಡ್ಯ ಲೋಕಸಭೆ ಕ್ಷೇತ್ರದಲ್ಲಿ ಹೆದ್ದಾರಿ ಮೂಲಸೌಕರ್ಯ ಅಭಿವೃದ್ಧಿ, ರಸ್ತೆಗಳ ಮೇಲಿನ ಒತ್ತಡ, ಸಂಚಾರ.
- ಮಂಡ್ಯ ನಗರಕ್ಕೆ ರಿಂಗ್ ರಸ್ತೆ (ದಕ್ಷಿಣ ಬೈಪಾಸ್) ನಿರ್ಮಾಣ.
- ರಾಷ್ಟ್ರೀಯ ಹೆದ್ದಾರಿ 150ಅ ಉದ್ದಕ್ಕೂ ರಾಷ್ಟ್ರೀಯ ಹೆದ್ದಾರಿ 275 (ಬೆಂಗಳೂರು-ಮೈಸೂರು ರಸ್ತೆ) ನ ಕಿ.ಮೀ. 595.260 ರಿಂದ ಪಾಂಡವಪುರ ಪಟ್ಟಣಕ್ಕೆ ಉದ್ದೇಶಿತ ಬೈಪಾಸ್ ರಸ್ತೆಗಾಗಿ ವಿವರವಾದ ಯೋಜನಾ ವರದಿ ಪ್ರಸ್ತುತ ಸಿದ್ಧತೆ.

ಪ್ರಕರಣದಲ್ಲಿ ಬೆಳವಣಿಗೆ ಕಂಡಿಲ್ಲ ಜಾಮೀನು ಕೊಡಿ ಎಂದು ಮನವಿ

ಜಾಮೀನು ಕೋರಿ ಮತ್ತೊಮ್ಮೆ ಹೈಕೋರ್ಟ್‌ಗೆ ಪ್ರಜ್ವಲ್ ಅರ್ಜಿ

ಬೆಂಗಳೂರು: ಮನೆ ಕೆಲಸಕ್ಕೆ ಬರುತ್ತಿದ್ದ ಮಹಿಳೆಯ ಮೇಲಿನ ಅತ್ಯಾಚಾರ ಪ್ರಕರಣದಲ್ಲಿ ಈವರೆಗೆ ಯಾವುದೇ ರೀತಿಯ ಬೆಳವಣಿಗೆ ಕಂಡಿಲ್ಲ. ಪರಿಣಾಮ ಜಾಮೀನು ಮಂಜೂರು ಮಾಡಬೇಕು ಎಂದು

ಅತ್ಯಾಚಾರ ಆರೋಪದಲ್ಲಿ ನ್ಯಾಯಾಂಗ ಬಂಧನದಲ್ಲಿ ರುವ ಹಾಸನ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಮತ್ತೊಮ್ಮೆ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ.

ಹೊಳೆನರಸೀಪುರ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ಜಾಮೀನು ಕೋರಿ ಪ್ರಜ್ವಲ್ ರೇವಣ್ಣ ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಎಸ್.ಆರ್.ಕೃಷ್ಣ ಕುಮಾರ್ ಅವರ ವಿಭಾಗೀಯ ಪೀಠ ನಡೆಸಿತು. ವಾದ ಪ್ರತಿವಾದ ಆಲಿಸಿದ ಪೀಠ, ವಿಚಾರಣೆಯನ್ನು ಗುರುವಾರ (ಜೂನ್ 26)ಕ್ಕೆ ಮುಂದೂಡಿತು.

ಪರಿಶೀಲನೆ ವಿಳಂಬ ಜಾಮೀನು ಕೊಡಿ: ವಿಚಾರಣೆ ವೇಳೆ ಪ್ರಜ್ವಲ್ ಪರ ವಕೀಲರು, ಅರ್ಜಿದಾರರಿಗೆ ಕಳೆದ ವರ್ಷ ಹೈಕೋರ್ಟ್‌ನ ಇದೇ ಪೀಠವು ಜಾಮೀನು ನಿರಾಕರಿಸಿತ್ತು. ಇದೇ ಆದೇಶವನ್ನು ಸುಪ್ರೀಂಕೋರ್ಟ್ ಸಹ ಎತ್ತಿ ಹಿಡಿದಿತ್ತು. ಆದರೆ, ಅಲ್ಲಿಂದ ಪ್ರಕರಣಲ್ಲಿ ಈವರೆಗೂ ಯಾವುದೇ ಪ್ರಕ್ರಿಯೆ ನಡೆದಿಲ್ಲ. 150ಕ್ಕೂ ಹೆಚ್ಚು ಸಾಕ್ಷಿಗಳನ್ನು ಪ್ರಾಸಿಕ್ಯೂಷನ್ ಉಲ್ಲೇಖಿಸಿತ್ತು. ಅವು ಸದ್ಯಕ್ಕೆ ಮುಗಿಯುವ ಲಕ್ಷಣವಿಲ್ಲ. ಅಲ್ಲದೇ, ಅಪಾರ ಪ್ರಮಾಣದ ಡಿಜಿಟಲ್ ಸಾಕ್ಷಿಗಳನ್ನು ಪ್ರಾಸಿಕ್ಯೂಷನ್ ಸಲ್ಲಿಸಿದೆ. ಅವುಗಳ ಪರಿಶೀಲನೆ ಸುಲಭಕ್ಕೆ ಮುಗಿಯುವುದಿಲ್ಲ. ಆದ್ದರಿಂದ ಜಾಮೀನು ಮಂಜೂರು ಮಾಡಬೇಕು ಎಂದು ಕೋರಿದರು. ಇದೇ ಪ್ರಕರಣದಲ್ಲಿ ಅರ್ಜಿದಾರ ಪ್ರಜ್ವಲ್ ಅವರ ತಂದೆ ಎಚ್.ಡಿ.ರೇವಣ್ಣ ವಿರುದ್ಧದ ವಿಚಾರಣೆಗೆ ತಡೆಯಾಜ್ಞೆ ಆಗಿದೆ. ಸಾಕ್ಷಿಗಳ ಮೇಲೆ ಪ್ರಭಾವ ಬೀರುವ ಆತಂಕ ಬಹುತೇಕ ಎಲ್ಲಾ ಪ್ರಕರಣಗಳಲ್ಲಿ ಆರೋಪಿಗಳ ಮೇಲೆ ಇರುತ್ತದೆ. ಇದಕ್ಕೆ ನಿರ್ದಿಷ್ಟವಾದ ಯಾವುದೇ ಷರತ್ತನ್ನು ನ್ಯಾಯಾಲಯ ವಿಧಿಸಬಹುದಾಗಿದೆ. ಸಂವಿಧಾನದ 21ನೇ ವಿಧಿಯಡಿ ಪ್ರಜ್ವಲ್‌ಗೆ ಸಾಂವಿಧಾನಿಕವಾಗಿ ದೊರೆತಿರುವ ಬದುಕುವ ಹಕ್ಕನ್ನು ಕಲ್ಪಿಸಬೇಕು. ತನಿಖೆ ಮುಗಿದು, ಸಕ್ಷಮ ನ್ಯಾಯಾಲಯಕ್ಕೆ ಆರೋಪ ಪಟ್ಟಿಗಳನ್ನು ಸಲ್ಲಿಸಿರುವುದರಿಂದ ಪ್ರಜ್ವಲ್ ಬಂಧನ ಅಗತ್ಯವಿಲ್ಲ. ಅವರನ್ನು ಜಾಮೀನಿನ ಮೇಲೆ ಬಿಡುಗಡೆ ಮಾಡಬೇಕು ಎಂದು ಪೀಠಕ್ಕೆ ಮನವಿ ಮಾಡಿದರು.

ಜಡ್ಜ್ ಮೇಲೆ ಆರೋಪ

ಅರ್ಜಿದಾರರ ಪರ ವಕೀಲರ ವಾದಕ್ಕೆ ಆಕ್ಷೇಪಿಸಿದ ಸರಕಾರದ ಪರ ವಕೀಲರು, ವಿಚಾರಣಾಧೀನ ವಿಶೇಷ ನ್ಯಾಯಾಲಯದ ನ್ಯಾಯಾಧೀಶರ ಮೇಲೆ ವಿನಾಕಾರಣ ಆರೋಪಗಳನ್ನು ಮಾಡಲಾಗಿದೆ. ವಿಚಾರಣೆ ವಿಳಂಬಕ್ಕೆ ಯಾರು ಕಾರಣ ಎಂಬುದನ್ನು ದಾಖಲೆ ಸಹಿತ ಸಾಬೀತುಪಡಿಸಲಾಗುವುದು. ಪ್ರಕರಣದಲ್ಲಿ ಸಂತ್ರಸ್ತೆಯನ್ನು ಪ್ರಜ್ವಲ್ ಕುಟುಂಬದವರು ಸೇರಿ ಅಪಹರಿಸಿದ್ದರು. ಒಟ್ಟಾರೆಯಾಗಿ, ಪ್ರಜ್ವಲ್ ಜಾಮೀನು ಅರ್ಜಿಯು ಊರ್ಜಿತವಾಗುವುದಿಲ್ಲ ಎಂದು ಪೀಠಕ್ಕೆ ವಿವರಿಸಿದರು.

PUBLIC NOTICE

This to inform the General public that I, **Smt. Shazia Usmani,** wife of late Mohammed Naseer Ahmed Usmani, aged about 43 years, R/at No.61/9, 2nd floor, 4th Cross, Marappa Thota, Munirmarappa Block, K.G Bydarahally, Bengaluru and my minor children have entered into a Sale Agreement dated 17.05.2025 with one Sri.Mohammed Muntaqeem, Son of late Gulam Jeelani, R/at No.27/2, 2nd Cross, Munivenkatappa Block, Bengaluru -560006 Represented by his GPA holder, Mrs.Mubeen Fathima, W/o late Gulam Jeelani, Aged about 64 years, R/at No.27/2, 2nd Cross, Munivenkatappa Block, Bengaluru -560006 in respect of the below mentioned schedule property. Wherein the said Sri.Mohammed Muntaqueem without obtaining any transferable right and getting the Sale deed registered in his name has illegally attempted to induct tenants in respect of the ground and first floor of the schedule property, after coming to know the illegal act of the said Sri.Mohammed Muntaqueem I had issued a legal notice dated 20-6-2025 to said Sri.Mohammed Muntaqueem, informing him that the Sale agreement dated 17.05.2025 is hereby stands cancelled and forfeited the entire advance sale consideration as per Agreement of Sale and the said Sri. Mohammed Muntaqueem does not derive any right, title and interest to act upon the Agreement of Sale and I am at liberty to alienate the schedule property to any third party. Hence the general Public are hereby warned not to have any sought of transaction with the above siad Sri. Mohammed Muntaqueem based on the Sale agreement dated 17.05.2025, if any person enter into any type of transaction with the above siad person, he will be doing at his own cost and risk and the same will be not binding on me.

SCHEDULE

All the piece and parcel of the Residential property bearing No.61/9, PID No.92-107-6/9, situated at 4th Cross, Marappa Thota, (Munirmarappa Block, K.G Bydarahally), BBMP Ward No.92, Bengaluru consisting of Ground, First and Second floor, measuring east to west 35 feet and north to south 30 feet in all measuring 1050 square feet, and bounded on **East by :** Private property (formerly Sundereshan Property), **West by :** Road, **North by :** Private property (formerly Venugopal Property) and **South by:** Private property (formerly B.R. Shankuthala Property)

ಗೌರವಾನ್ವಿತ ಅಪರ ಹಿರಿಯ ಶ್ರೇಣಿ ನ್ಯಾಯಾಧೀಶರ ನ್ಯಾಯಾಲಯ, ಕುಣಿಗಲ್
ಅ.ದಾ ನಂ. 192/2022

ವಾದಿಯರು : ಟಿ.ಲಕ್ಷ್ಮಮ್ಮ ಮತ್ತು ಇತರರು,
ವಿರುದ್ಧ
ಪ್ರತಿವಾದಿಯರು : ಟಿ.ಎನ್ ನಂಜಪ್ಪ ಮತ್ತು ಇತರರು,
3) ಜಯಲಕ್ಷ್ಮಮ್ಮ ಎಮ್. ಕೋಂ ಲೇಟ್ ಮೂಡಲಗಿರಯ್ಯ ವಯಸ್ಸು ಸುಮಾರು 69 ವರ್ಷ, ವಾಸ: ನಂ 86, 3ನೇ ಅಡ್ಡರಸ್ತೆ, ಕೆಂಪೇಗೌಡ ಪೊಲೀಸ್ ಠಾಣೆ ಹತ್ತಿರ ಕೆ.ಜಿ. ನಗರ, ಆರ್.ಕೆ ಬಡಾವಣೆ, ಬೆಂಗಳೂರು ದಕ್ಷಿಣ, ಗವಿಪುರ ಎಕ್ಸಟೆಂಷನ್, ಬೆಂಗಳೂರು 19

ಸಾರ್ವಜನಿಕ ಪತ್ರಿಕಾ ಪ್ರಕಟಣೆ

ಮೇಲ್ಕಂಡ ವಾದಿ ದಾವಾ ಸ್ವತ್ತುಗಳ ಸಂಬಂದ ಭಾಗಾಂಶ ಮತ್ತು ಇತರೆ ಪರಿಹಾರಗಳನ್ನು ಕೋರಿ ಪ್ರತಿವಾದಿಗಳ ವಿರುದ್ಧ ದಾವೆ ಸಲ್ಲಿಸಿದ್ದು, ಇದಕ್ಕೆ ಸಂಬಂಧಿಸಿದಂತೆ ಮೇಲ್ಕಂಡ 3ನೇ ಪ್ರತಿವಾದಿಯಾಗಲೀ, ಅವರ ವಾರಸುದಾರರಾಗಲೀ ಅಥವಾ ಯಾರಾದರೂ ತಕರಾರುದಾರರು, ಹಿತಾಸಕ್ತಿ ಉಳ್ಳವರು ಇದ್ದ ಪಕ್ಷದಲ್ಲಿ ದಿನಾಂಕ: 30.07.2025 ರ ಬೆಳಗ್ಗೆ 11.00 ಗಂಟೆಗೆ ತಾವುಗಳಾಗಲೀ, ಅಥವಾ ತಮ್ಮ ಪರ ವಕೀಲರ ಮುಖಾಂತರವಾಗಲೀ ಖುದ್ದಾಗಿ ನ್ಯಾಯಾಲಯದ ಮುಂದೆ ಹಾಜರಾಗಿ ತಕರಾರು ಸಲ್ಲಿಸಬಹುದು. ಇಲ್ಲವಾದ ಪಕ್ಷದಲ್ಲಿ ಸದರಿ ಪ್ರಕರಣದಲ್ಲಿ ನಿಮ್ಮಗಳ ವಿರುದ್ಧ ಏಕ ಪಕ್ಷೀಯವಾಗಿ ತೀರ್ಮಾನಿಸಲಾಗುವುದು.

ದಾವಾ ಷೆಡ್ಯೂಲ್ ಸ್ವತ್ತಿನ ವಿವರ

(ಖ) ಸರ್ವೆ ನಂ.6/1ರಲ್ಲಿ ವಿಸ್ತೀರ್ಣ 0-02 ಗುಂಟೆ, (2) ಸರ್ವೆ ನಂ.117/8ರಲ್ಲಿ ವಿಸ್ತೀರ್ಣ 0-17 ಗುಂಟೆ, (3) ಸರ್ವೆ ನಂ.143/3ರಲ್ಲಿ ವಿಸ್ತೀರ್ಣ 2 ಎಕರೆ 22 ಗುಂಟೆ, (4) ಸರ್ವೆ ನಂ.145/1ರಲ್ಲಿ ವಿಸ್ತೀರ್ಣ 0-21 ಗುಂಟೆ, (5) ಸರ್ವೆ ನಂ.145/3ರಲ್ಲಿ ವಿಸ್ತೀರ್ಣ 0-36.08 ಗುಂಟೆ, (6) ಗ್ರಾಮದ ಸರ್ವೆ ನಂ.146/3ರಲ್ಲಿ ವಿಸ್ತೀರ್ಣ 2 ಎಕರೆ 35 ಗುಂಟೆ, (7) ಸರ್ವೆ ನಂ.149/10 ಲ್ಲಿ ವಿಸ್ತೀರ್ಣ 0-15 ಗುಂಟೆ (8) ಸರ್ವೆ ನಂ.149/14 ರಲ್ಲಿ ವಿಸ್ತೀರ್ಣ 0-6.08 ಗುಂಟೆ (9) ಸರ್ವೆ ನಂ.160/2 ರಲ್ಲಿ ವಿಸ್ತೀರ್ಣ 0-32 ಗುಂಟೆ (10) ಸರ್ವೆ ನಂ.160/4 ರಲ್ಲಿ ವಿಸ್ತೀರ್ಣ 0-15.12 ಗುಂಟೆ (11) ಸರ್ವೆ ನಂ.161/5ರಲ್ಲಿ ವಿಸ್ತೀರ್ಣ 1 ಎಕರೆ (12) ಸರ್ವೆ ನಂ.169/20 ರಲ್ಲಿ ವಿಸ್ತೀರ್ಣ 0.07 ಗುಂಟೆ ಎಲ್ಲಾ ಸ್ವತ್ತುಗಳು ಕುಣಿಗಲ್ ತಾ, ಯಡಿಯೂರು ಹೋಬಳಿ, ತುವ್ವೆಕೆರೆ ಗ್ರಾಮದಲ್ಲಿರುತ್ತವೆ.

ಸದರಿ ಪ್ರಕರಣೆಯು ದಿನಾಂಕ.24.06.2025 ರಂದು ನ್ಯಾಯಾಲಯದ ಸಹಿ ಮತ್ತು ಮೊಹರಿನೊಂದಿಗೆ ನೀಡಲಾಗುವುದು.

ನ್ಯಾಯಾಲಯದ ಆದೇಶದ ಮೇರೆಗೆ,
Shirastedar (ADM)
Senior Civil Judge & JMFC Court
Kunigal
ಡಿ.ವಿ. ಪವಮಾನ್
ವಾದಿ ಪರ ವಕೀಲರು
ಬೆಂಗಳೂರು

ಆಧಾರ್ ಹೌಸಿಂಗ್ ಫೈನಾನ್ಸ್ ಲಿಮಿಟೆಡ್
ನೋಂದಾಯಿತ ವಿಳಾಸ: 2ನೇ ಮಹಡಿ, ನಂ. 3, ಜೆವಿಟಿ ಟವರ್ಸ್, 8ನೇ ಎ ಮುಖ್ಯ ರಸ್ತೆ, ಸಂಪಂಗಿ ರಾಮ ನಗರ, ಹಡ್ಸನ್ ವೃತ್ತ, ಬೆಂಗಳೂರು, ಕರ್ನಾಟಕ, ಭಾರತ-560027. CIN : L66010KA1990PLC011409
Aadhar Housing Finance Ltd
GHAR BANEGA, TOH DESH BANEGA

ಆಧಾರ್ ಹೌಸಿಂಗ್ ಫೈನಾನ್ಸ್ ಲಿಮಿಟೆಡ್‌ನ 35ನೇ (ಮೂವತ್ತೈದನೇ) ವಾರ್ಷಿಕ ಮಹಾಸಭೆಯ ಮಾಹಿತಿ ಸಂಬಂಧಿಸಿದಂತೆ

1. ಆಧಾರ್ ಹೌಸಿಂಘ್ ಫೈನಾನ್ಸ್ ಲಿಮಿಟೆಡ್ ನ ("ದಿ ಕಂಪನಿ/ನಿಮ್ಮ ಕಂಪನಿ") 35ನೇ (ಮೂವತ್ತೈನೇ) ವಾರ್ಷಿಕ ಮಹಾಸಭೆಯು ("ಎಜಿಎಂ / ಸಭೆ") ದಿನಾಂಕ ಜುಲೈ 29, 2025ರ ಮಂಗಳವಾರದಂದು ಬೆಳಿಗ್ಗೆ 10:00 ಗಂಟೆಗೆ (ಭಾರತೀಯ ಕಾಲಮಾನ) [illegible]

ಸ್ಥಳ: ಮುಂಬಯಿ
ದಿನಾಂಕ: 24ನೇ ಜೂನ್ 2025

ತಿರುಮಲ ತಿರುಪತಿ ದೇವಸ್ಥಾನದಿಂದ ನಂದಿನಿ ತುಪ್ಪಕ್ಕೆ ಬೇಡಿಕೆ

ಬರೋಬ್ಬರಿ ಹತ್ತು ಲಕ್ಷ ಕೆ.ಜಿ. ತುಪ್ಪಕ್ಕೆ ಬೇಡಿಕೆಯಿಟ್ಟ ಟಿಟಿಡಿ

ಬೆಂಗಳೂರು: ತಿರುಮಲ ತಿರುಪತಿ ದೇವಸ್ಥಾನಂನಿಂದ ರಾಜ್ಯದ ನಂದಿನಿ ತುಪ್ಪಕ್ಕೆ ಬೇಡಿಕೆ ಮತ್ತಷ್ಟು ಹೆಚ್ಚಾಗಿದ್ದು, ಬರೋಬ್ಬರಿ 10 ಲಕ್ಷ ಕೆ.ಜಿ ತುಪ್ಪಕ್ಕೆ ಟಿಟಿಡಿ ಬೇಡಿಕೆ ಇಟ್ಟಿದೆ.

ದೇವರ ಪ್ರಸಾದಕ್ಕೆ ನಂದಿನಿ ತುಪ್ಪ ಹೊರತುಪಡಿಸಿ ಬೇರೆ ಯಾವುದೇ ತುಪ್ಪ ಬೇಡ ಎಂದು ಟಿಟಿಡಿ ಬೇಡಿಕೆ ಇಟ್ಟ ಹಿನ್ನೆಲೆಯಲ್ಲಿ ಕರ್ನಾಟಕ ಹಾಲು ಮಹಾಮಂಡಳ ತಿರುಪತಿಗೆ ಅಗತ್ಯ ತುಪ್ಪವನ್ನು ಕಳುಹಿಸಿಕೊಟ್ಟಿದೆ. ಸೋಮವಾರ ಒಂದೇ ದಿನ ತಿರುಪತಿಗೆ 2.50 ಲಕ್ಷ ಕೆಜಿ ತುಪ್ಪವನ್ನು ಕರ್ನಾಟಕ ಹಾಲು ಉತ್ಪಾದಕರ ಮಹಾಮಂಡಳ ಬಿಗಿ ಭದ್ರತೆಯೊಂದಿಗೆ ಕಳುಹಿಸಿಕೊಟ್ಟಿದೆ. ಮೊದಲ ಭಾಗವಾಗಿ ಮಂಡ್ಯದ ಹಾಲು ಒಕ್ಕೂಟದಿಂದ ತುಪ್ಪ ಪೂರೈಕೆ ಮಾಡಿದ್ದು ಇನ್ನುಳಿದ ತುಪ್ಪವನ್ನು ಇತರೇ ಮಹಾ ಮಂಡಳಿಯಿಂದ ಕೆಎಂಎಫ್ ಕಳುಹಿಸಿ ಕೊಡಲಿದೆ. ತಿರುಪತಿ ಅಗತ್ಯಕ್ಕೆ ತಕ್ಕಂತೆ ನಂದಿನಿ ತುಪ್ಪ ಪೂರೈಕೆ ಮಾಡುವುದಾಗಿ ಕೆಎಂಎಫ್ ತಿಳಿಸಿದ್ದು, ತಿರುಪತಿಯ ಲಡ್ಡುಗೆ ಮೊದಲು ಕೆಎಂಎಫ್‌ನಿಂದಲೇ ತುಪ್ಪ ಸರಬರಾಜು ಆಗುತ್ತಿತ್ತು. ಆದರೆ ಕೆಎಂಎಫ್ ತುಪ್ಪದ ಬೆಲೆ ಜಾಸ್ತಿ ಆಗಿದೆ ಎಂಬ ಕಾರಣ ನೀಡಿ ಜಗನ್ ಸರಕಾರ ಖಾಸಗಿ ಡೈರಿಯಿಂದ ತುಪ್ಪ ಖರೀದಿ ಮಾಡಿತ್ತು.

ಆಂಧ್ರದಲ್ಲಿ ಟಿಟಿಡಿ ಮೈತ್ರಿ ಸರಕಾರ ಅಧಿಕಾರಕ್ಕೆ ಬಂದ ನಂತರ ತಿರುಪತಿ ಲಡ್ಡಿನಲ್ಲಿ ಬಳಸುವ ತುಪ್ಪ ದೊಡ್ಡ ವಿವಾದಕ್ಕೆ ಕಾರಣವಾಗಿತ್ತು. ತುಪ್ಪ ಖರೀದಿ ಟೆಂಡರ್‌ನಲ್ಲಿ ಅವ್ಯವಹಾರ ನಡೆದಿದೆ. ಕಳಪೆ ಗುಣಮಟ್ಟದ ಹಾಗೂ ಕಲಬೆರಕೆಯಾದ ತುಪ್ಪವನ್ನು ಪೂರೈಕೆ ಮಾಡಲಾಗಿದೆ ಎಂದು ಆಂಧ್ರ ಸಿಎಂ ಚಂದ್ರಬಾಬು ನಾಯ್ಡು ಗಂಭೀರ ಆರೋಪ ಮಾಡಿದ್ದರು. ಈ ಆರೋಪದ ಬಳಿಕ ಟಿಟಿಡಿ ಖಾಸಗಿ ಡೈರಿಯಿಂದ ತುಪ್ಪ ಖರೀದಿ ಮಾಡುವುದನ್ನು ನಿಲ್ಲಿಸಿ ಕೇವಲ ಕೆಎಂಎಫ್ ನಿಂದಲೇ ತುಪ್ಪ ಖರೀದಿಗೆ ಮುಂದಾಗಿದೆ.

ಹಲ್ಲೆ ಪ್ರಕರಣದಲ್ಲಿ ಬಂಧನವಾಗಿದ್ದ ಅನಂತ್ ಕುಮಾರ್ ಹೆಗಡೆ ಕಾರು ಚಾಲಕ, ಗನ್ ಮ್ಯಾನ್

ರೋಡ್ ರೇಜ್: ಬಂಧಿತರಿಗೆ ಜಾಮೀನು

ಬೆಂಗಳೂರು: ನೆಲಮಂಗಲದ ಬಳಿ ಮಾಜಿ ಸಂಸದ ಅನಂತ್ ಕುಮಾರ್ ಹೆಗಡೆ ರೋಡ್ ರೇಜ್ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧಿತ ಆರೋಪಿಗಳಿಗೆ ಜಾಮೀನು ಸಿಕ್ಕಿದೆ.

ಹಲ್ಲೆ ಪ್ರಕರಣದಲ್ಲಿ ಬಂಧನಕ್ಕೊಳಗಾಗಿದ್ದ ಅನಂತ್ ಕುಮಾರ್ ಹೆಗಡೆ ಅವರ ಕಾರು ಚಾಲಕ ಹಾಗೂ ಗನ್ ಮ್ಯಾನ್ ಅವರಿಗೆ ನೆಲಮಂಗಲ ನ್ಯಾಯಾಲಯ ಷರತ್ತುಬದ್ಧ ಜಾಮೀನು ನೀಡಿ ಆದೇಶ ಹೊರಡಿಸಿದೆ. ಗನ್ ಮ್ಯಾನ್ ಹಾಗೂ ಡ್ರೈವರ್ ಪರವಾಗಿ ವಕೀಲ ನಾಗೇಂದ್ರ ವಾದ ಮಂಡಿಸಿದ್ದು, ನೋಟಿಸ್ ನೀಡದೇ ಇಬ್ಬರನ್ನೂ ಬಂಧನ ಮಾಡಿದ್ದಾರೆ. 112 ಗೆ ಕರೆ ಬಂದ ತಕ್ಷಣ ಠಾಣೆಗೆ ಕರೆದೊಯ್ದಿದ್ದಾರೆ. ಎಫ್‌ಐಆರ್ ದಾಖಲಾಗುವ ಮುನ್ನ ಬಂಧನ ತೋರಿಸಿದ್ದಾರೆ ಎಂದು ಕೋರ್ಟ್‌ಗೆ ತಿಳಿಸಿದರು. ಇದಕ್ಕೆ ಪ್ರತಿವಾದ ಮಂಡಿಸಿದ ಪಿಪಿ, ಆರೋಪಿಗಳು ಹಲ್ಲೆ ನಡೆಸಿರುವುದು ಸಾಕ್ಷಿ ಸಿಕ್ಕಿರುವುದರಿಂದ ಬಂಧನ ಮಾಡಲಾಗಿದೆ ಎಂದರು. ಈ ವಾದ ಪ್ರತಿವಾದ ಆಲಿಸಿದ ನ್ಯಾಯಾಧೀಶೆ ಪೂಜಾ ಶೆಟ್ಟಿ, ಇಬ್ಬರಿಗೂ ಷರತ್ತು ಬದ್ಧ ಜಾಮೀನು ನೀಡಿ ಆದೇಶ ಹೊರಡಿಸಿದರು.

ನೆಲಮಂಗಲ ತಾಲೂಕಿನ ಹಳೇ ನಿಜಗಲ್ ಬಳಿ ಇನ್ನೋವಾ ಕಾರಿನಲ್ಲಿದ್ದ ನಾಲ್ವರ ಮೇಲೆ ಹಲ್ಲೆ, ಗೂಂಡಾಗಿರಿ ನಡೆಸಿದ ಆರೋಪದಲ್ಲಿ ಕೇಂದ್ರದ ಮಾಜಿ ಸಚಿವ, ಉತ್ತರ ಕನ್ನಡ ಕ್ಷೇತ್ರದ ಮಾಜಿ ಸಂಸದ ಅನಂತ ಕುಮಾರ್ ಹೆಗಡೆ, ಅವರ ಕಾರು ಚಾಲಕ ಹಾಗೂ ಗನ್‌ಮ್ಯಾನ್ ಮೇಲೆ ಎಫ್‌ಐಆರ್ ದಾಖಲಾಗಿತ್ತು. ಇನ್ನು ಹಲ್ಲೆ ನಡೆಸಿದ್ದ ಗನ್‌ಮ್ಯಾನ್ ಶ್ರೀಧರ್, ಚಾಲಕ ಮಹೇಶ್ ನನ್ನು ದಾಬಸ್ ಪೇಟೆ ಪೊಲೀಸರು ಬಂಧಿಸಿದ್ದರು.

ನನಗೆ ಬಂದಿರುವ ಮಾಹಿತಿ ಪ್ರಕಾರ ಅನಂತ್ ಕುಮಾರ್ ಹೆಗಡೆ ಹೆದ್ದಾರಿಯಲ್ಲಿ ಬರಬೇಕಾದರೆ ಘಟನೆ ನಡೆದಿದೆ. ಡ್ರೈವರ್, ಗನ್ ಮ್ಯಾನ್ ಕಾರು ನಿಲ್ಲಿಸಿ ಹೊಡೆದಿದ್ದಾರೆ ಎಂದು ಹೇಳಲಾಗಿದೆ. ಆದರೆ ಗನ್‌ಮ್ಯಾನ್ ಹೊಡೆದಿಲ್ಲ ಅಂತಿದ್ದಾರೆ. ಈ ಬಗ್ಗೆ ಈಗಲೇ ಹೇಳೋಕೆ ಆಗಲ್ಲ. ಸಂಪೂರ್ಣ ತನಿಖೆ ಆಗಬೇಕಿದೆ. ಇನ್ನಷ್ಟು ದಿನ ಕಾದು ನೋಡೋಣ.

-ಡಾ.ಜಿ. ಪರಮೇಶ್ವರ, ಗೃಹ ಸಚಿವ

ಏನಿದು ಘಟನೆ?

ಅನಂತ್ ಕುಮಾರ್ ಹೆಗಡೆ ಅವರು ತೆರಳುತ್ತಿದ್ದ ಕಾರನ್ನು, ಓವರ್‌ಟೇಕ್ ಮಾಡಲಾಯಿತು ಎಂಬ ಕಾರಣಕ್ಕೆ ಇನ್ನೋವಾ ಕಾರಿನಲ್ಲಿದ್ದ ನಾಲ್ವರ ಮೇಲೆ, ಅನಂತ್ ಕುಮಾರ್ ಹೆಗಡೆ ಪುತ್ರ ಅಶುತೋಷ್, ಚಾಲಕ ಹಾಗೂ ಗನ್‌ಮ್ಯಾನ್ ಹಲ್ಲೆ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ. ಇನ್ನೋವಾ ಕಾರಿನಲ್ಲಿ ಸಲ್ಮಾನ್, ಸೈಫ್, ಇಲಿಯಾಜ್ ಖಾನ್ ಹಾಗೂ ಉನ್ನೀಸಾ ಎಂಬುವರ ಮೇಲೆ ಹಲ್ಲೆ ನಡೆದಿದ್ದು, ಅವರಿಗೆ ದಾಬಸ್‌ಪೇಟೆಯ ಸರಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಇನ್ನು ಹಲ್ಲೆಗೊಳಗಾಗಿದ್ದ ಸೈಫ್ ನೀಡಿದ ದೂರಿನ ಮೇರೆಗೆ ದಾಬಸ್‌ಪೇಟೆ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು.

4 ವಾರಗಳಲ್ಲಿ ಕ್ರಮ ತೆಗೆದುಕೊಂಡ ವರದಿ ಸಲ್ಲಿಸಲು ಸರಕಾರಕ್ಕೆ ಸೂಚನೆ

ಸುಳ್ಳು ಪ್ರಮಾಣಪತ್ರ: ಹೈ ಕೆಂಡ

ಬೆಂಗಳೂರು: ರಾಜ್ಯದಲ್ಲಿ ನಕಲಿ ಅಥವಾ ಸುಳ್ಳು ಜಾತಿ ಪ್ರಮಾಣತ್ರಗಳನ್ನು ಪಡೆದುಕೊಂಡವರ ಹಾಗೂ ಅವುಗಳನ್ನು ವಿತರಿಸಿದವರ ವಿರುದ್ಧ ಕೈಗೊಂಡಿರುವ ಕ್ರಮಗಳ ಬಗ್ಗೆ ನಾಲ್ಕು ವಾರಗಳಲ್ಲಿ ವರದಿ ಸಲ್ಲಿಸುವಂತೆ ರಾಜ್ಯ ಸರಕಾರಕ್ಕೆ ಹೈಕೋರ್ಟ್ ನಿರ್ದೇಶನ ನೀಡಿದೆ.

ರಾಜ್ಯ ಎಸ್ಸಿ-ಎಸ್ಟಿ ನಕಲಿ ಜಾತಿ ಪ್ರಮಾಣಪತ್ರಗಳ ತಡೆ ಸಮಿತಿ ಪ್ರಧಾನ ಕಾರ್ಯದರ್ಶಿ ಮಾರಪ್ಪ ನಾಯಕ್ ಹಾಗೂ ಇತರರು ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ನಡೆಸಿದ ಹಂಗಾಮಿ ಮುಖ್ಯ ನ್ಯಾಯಮೂರ್ತಿ ವಿ. ಕಾಮೇಶ್ವರ್ ರಾವ್ ಹಾಗೂ ನ್ಯಾಯಮೂರ್ತಿ ಸಿ.ಎಂ. ಜೋಶಿ ಅವರಿದ್ದ ವಿಭಾಗೀಯ ಪೀಠ ಈ ಸೂಚನೆ ನೀಡಿ ವಿಚಾರಣೆಯನ್ನು ಮುಂದೂಡಿದೆ.

ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ನಕಲಿ ಅಥವಾ ಸುಳ್ಳು ಜಾತಿ ಪ್ರಮಾಣಪತ್ರ ಪಡೆದುಕೊಂಡವರ ಹಾಗೂ ಅದಕ್ಕೆ ಕಾರಣರಾದವರ ವಿರುದ್ಧ ಕೈಗೊಂಡ ಕ್ರಮಗಳ ಬಗ್ಗೆ ವರದಿ ನೀಡುವಂತೆ ಈ ಹಿಂದೆ ಹೈಕೋರ್ಟ್ ಆದೇಶಿಸಿತ್ತು. ಅದರಂತೆ ಸಮಾಜ ಕಲ್ಯಾಣ ಇಲಾಖೆ ಆಯುಕ್ತರು ಹಾಗೂ ಪರಿಶಿಷ್ಟ ಪಂಗಡ ಕಲ್ಯಾಣ ನಿರ್ದೇಶಕರು ನ್ಯಾಯಾಲಯಕ್ಕೆ ವಸ್ತುಸ್ಥಿತಿ ವರದಿ ಸಲ್ಲಿಸಬೇಕಿತ್ತು. ಆದರೆ, ಈವರೆಗೆ ವರದಿ ಸಲ್ಲಿಸಿಲ್ಲ ಎಂದು ಪೀಠಕ್ಕೆ ವಿವರಿಸಿದರು.

ಸೆಪ್ಟೆಂಬರ್ 9ಕ್ಕೆ ವಿಚಾರಣೆ ಮುಂದೂಡಿಕೆ: ಇದಕ್ಕೆ ಸರಕಾರದ ಪರ ವಕೀಲರು, ಈ ವಿಚಾರಕ್ಕೆ ಸಂಬಂಧಿಸಿದಂತೆ ವಿಶೇಷ ವಕೀಲರನ್ನು ಈಗಷ್ಟೇ ನೇಮಕ ಮಾಡಲಾಗಿದೆ. ನ್ಯಾಯಾಲಯದ ಆದೇಶದಂತೆ ವರದಿ ಸಲ್ಲಿಸಲು ಕಾಲಾವಕಾಶ ಬೇಕು ಎಂದು ಕೋರಿದರು. ಇದನ್ನು ಪರಿಗಣಿಸಿದ ನ್ಯಾಯಪೀಠ ನಾಲ್ಕು ವಾರಗಳಲ್ಲಿ ವರದಿ ಸಲ್ಲಿಸುವಂತೆ ನಿರ್ದೇಶನ ನೀಡಿ ವಿಚಾರಣೆಯನ್ನು ಸೆ.9ಕ್ಕೆ ಮುಂದೂಡಿತು.

ಅಧಿಕಾರಿಗಳ ಅಮಾನತು ಸರಕಾರಕ್ಕೆ ಸಿಎಟಿ ಚಾಟಿ

ಬೆಂಗಳೂರು: ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಐಪಿಎಸ್‌ಸ ಅಧಿಕಾರಿ ಬಿ.ದಯಾನಂದ್ ಸೇರಿ ಐದು ಮಂದಿ ಪೊಲೀಸ್ ಅಧಿಕಾರಿಗಳನ್ನು ಅಮಾನತು ಮಾಡಿರುವ ಸರಕಾರದ ನಿರ್ಧಾರವನ್ನು ಸಿಎಟಿ ಪ್ರಶ್ನಿಸಿದ್ದು, ಸರಕಾರಕ್ಕೆ ಚಾಟಿ ಬೀಸಿದೆ. ತಮ್ಮನ್ನು ಅಮಾನತು ಮಾಡಿದ ಸರಕಾರದ ಆದೇಶವನ್ನು ಪ್ರಶ್ನಿಸಿ ಐಪಿಎಸ್ ಅಧಿಕಾರಿ ವಿಕಾಸ್ ಕುಮಾರ್ ಅವರು ಸಲ್ಲಿಸಿದ್ದ ಅರ್ಜಿ ಸಲ್ಲಿಸಿದ್ದಾರೆ. ಈ ಅರ್ಜಿ ವಿಚಾರಣೆ ನಡೆಸಿದ ಕೇಂದ್ರ ಆಡಳಿತಾತ್ಮಕ ನ್ಯಾಯಮಂಡಳಿ, ಮ್ಯಾಜಿಸ್ಟೀರಿಯಲ್ ತನಿಖೆ ವರದಿ ಬರುವ ಮುನ್ನವೇ ಅಮಾನತು ಮಾಡಿದ್ದೇಕೆ? ಕ್ರೀಡಾಂಗಣದಲ್ಲಿ ಸಂಭ್ರಮಾಚರಣೆಗೆ ಪೊಲೀಸರು ಅನುಮತಿ ನೀಡಿಲ್ಲ. ಹಾಗಿದ್ದಾಗ ಪೊಲೀಸ್ ಅಧಿಕಾರಿಗಳ ಅಮಾನತಿಗೆ ಆಧಾರವೇನು? ಎಂದು ರಾಜ್ಯ ಸರಕಾರಕ್ಕೆ ಪ್ರಶ್ನಿಸಿದೆ. ಅರ್ಜಿ ವಿಚಾರಣೆ ಪೂರ್ಣಗೊಳಿಸಿದ ಸಿಎಟಿ ಆದೇಶ ಕಾಯ್ದಿರಿಸಿದೆ.

ಕಾಲ್ತುಳಿತ ಪ್ರಕರಣ ಸಂಬಂಧ ಸರಕಾರ ಜೂ.5 ರಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್, ಕೇಂದ್ರ ವಿಭಾಗದ ಡಿಸಿಪಿ ಎಚ್.ಟಿ.ಶೇಖರ್, ಪಶ್ಚಿಮ ವಿಭಾಗದ ಹೆಚ್ಚುವರಿ ಪೊಲೀಸ್ ಆಯುಕ್ತ ವಿಕಾಸ್ ಕುಮಾರ್, ಎಸಿಪಿ ಬಾಲಕೃಷ್ಣ, ಕಬ್ಬನ್‌ಪಾರ್ಕ್ ಇನ್ಸ್‌ಪೆಕ್ಟರ್ ಗಿರೀಶ್ ಅವರನ್ನು ಅಮಾನತು ಮಾಡಲಾಗಿತ್ತು.

ಅಪಹರಣ: ಇಬ್ಬರ ಬಂಧನ

ಬೆಂಗಳೂರು: ಹಣದ ವ್ಯವಹಾರದಲ್ಲಿ ಪರಸ್ಪರ ಗಲಾಟೆಯಾಗಿ ಪರಿಚಿತ ವ್ಯಕ್ತಿಯನ್ನೇ ಅಪಹರಿಸಿದ್ದ ಇಬ್ಬರನ್ನು ಕೆ.ಪಿ.ಅಗ್ರಹಾರ ಠಾಣೆ ಪೊಲೀಸರು ಬಂಧಿಸಿದ್ದಾರೆ. ಇಮ್ರಾನ್ ಖಾನ್ ಎಂಬಾತನನ್ನು ಅಪಹರಿಸಿದ್ದ ಸೈಯ್ಯದ್ ಮುಜಾಹಿದ್ (39) ಹಾಗೂ ಸೈಯ್ಯದ್ ಜಾಕಿರ್ (29) ಬಂಧಿತ ಆರೋಪಿಗಳು. ಆರೋಪಿ, ಶಿರಾ ಮೂಲದ ಸೈಯ್ಯದ್ ಮುಜಾಹಿದ್ ಹಾಗೂ ಇಮ್ರಾನ್ ಖಾನ್ ಇಬ್ಬರೂ ಸಹ ಕಾರು ವ್ಯಾಪಾರಿಗಳಾಗಿದ್ದರು. ಇಬ್ಬರ ನಡುವೆ 2.5 ಲಕ್ಷ ರುಪಾಯಿ ಹಣದ ವ್ಯವಹಾರ ನಡೆದಿತ್ತು. ಹಣ ವಾಪಸ್ ಕೇಳಿದಾಗಲೆಲ್ಲ ಕಾರಣ ಹೇಳಿ ಇಮ್ರಾನ್ ಖಾನ್ ಸತಾಯಿಸುತ್ತಿದ್ದ. ಈ ಹಿನ್ನೆಲೆಯಲ್ಲಿ ಇಮ್ರಾನ್ ಖಾನ್‌ನನ್ನು ಅಪಹರಿಸಿ ಹಣ ವಸೂಲಿ ಮಾಡಲು ಸೈಯ್ಯದ್ ಮುಜಾಹಿದ್ ಯೋಚಿಸಿದ್ದ. ಮೂರು ದಿನಗಳ ಹಿಂದೆಯಷ್ಟೇ ಸ್ನೇಹಿತ ಸೈಯ್ಯದ್ ಜಾಕೀರ್ ಜತೆಗೂಡಿ ಸ್ಕಾರ್ಪಿಯೋ ಕಾರಿನಲ್ಲಿ ಇಮ್ರಾನ್ ಖಾನ್‌ನನ್ನು ಅಪಹರಿಸಲಾಗಿತ್ತು. ಬಳಿಕ ಆರೋಪಿಗಳು ಇಮ್ರಾನ್ ಖಾನ್‌ನನ್ನು ತುಮಕೂರಿಗೆ ಕರೆದೊಯ್ದಿದ್ದರು. ಪತಿಯ ಅಪಹರಣದ ವಿಚಾರ ತಿಳಿದ ಇಮ್ರಾನ್ ಖಾನ್ ಪತ್ನಿ ಕೆ.ಪಿ ಅಗ್ರಹಾರ ಠಾಣೆಗೆ ದೂರು ನೀಡಿದ್ದರು. ತ್ವರಿತವಾಗಿ ಕಾರ್ಯ ಪ್ರವೃತ್ತರಾದ ಪೊಲೀಸರು ತುಮಕೂರಿನ ಶಿರಾಗೆ ತೆರಳಿ ಆರೋಪಿಗಳನ್ನು ಬಂಧಿಸಿದ್ದಾರೆ. ಆರೋಪಿಗಳ ವಶದಲ್ಲಿದ್ದ ಇಮ್ರಾನ್ ಖಾನ್‌ನನ್ನು ರಕ್ಷಿಸಲಾಗಿದ್ದು, ಕಾರು ಸಮೇತ ಇಬ್ಬರನ್ನು ಬಂಧಿಸಿರುವುದಾಗಿ ಬೆಂಗಳೂರು ಪಶ್ಚಿಮ ವಿಭಾಗದ ಡಿಸಿಪಿ ಎಸ್.ಗಿರೀಶ್ ತಿಳಿಸಿದ್ದಾರೆ.

ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ, ಕನಕಪುರ
ಸಿ.ಮಿಸ್.ನಂ.276/2025

ಅರ್ಜಿದಾರರು: ಶ್ರೀಮತಿ. ಜಯಮ್ಮ ಕೋಂ ಲೇಟ್ ವೆಂಕಟಯ್ಯ, ವಯಸ್ಸು 40 ವರ್ಷ ವಾಸ: #160,ಅಣೆದೊಡ್ಡಿ ಗ್ರಾಮ, ಕೊಳ್ಳಿಗನಹಳ್ಳಿ ಅಂಚೆ, ಹಾರೋಹಳ್ಳಿ ಹೋಬಳಿ, ಹಾರೋಹಳ್ಳಿ ತಾಲ್ಲೂಕು, ರಾಮನಗರ ಜಿಲ್ಲೆ. ಮತ್ತು ಇತರರು
ವಿರುದ್ಧ
ಪ್ರತಿ ಅರ್ಜಿದಾರರು: 1. ಜನನ ಮತ್ತು ಮರಣ ನೊಂದಣಿ ಅಧಿಕಾರಿಗಳು, ತಹಶೀಲ್ದಾರ್ ಹಾರೋಹಳ್ಳಿ ಹಾರೋಹಳ್ಳಿ ತಾಲ್ಲೂಕು, 2. ಗ್ರಾಮ ಲೆಕ್ಕಾಧಿಕಾರಿಗಳು, ಕೊಳ್ಳಿಗನಹಳ್ಳಿ ವೃತ್ತ, ಹಾರೋಹಳ್ಳಿ ಹೋಬಳಿ, ಹಾರೋಹಳ್ಳಿ ತಾಲ್ಲೂಕು, ರಾಮನಗರ ಜಿಲ್ಲೆ.

ಪ್ರಕಟಣೆ

ಮೇಲ್ಕಾಣಿಸಿರುವ ಅರ್ಜಿದಾರರು ಈ ಮೂಲಕ ತಿಳಿಯಪಡಿಸುವುದೇನೆಂದರೆ 1ನೇ ಅರ್ಜಿದಾರರ ಮಾವ, 2 ಮತ್ತು 3ನೇ ಅರ್ಜಿದಾರರ ತಾತನವರಾದ ಮೂಡಲಯ್ಯ ಬಿನ್ ಲೇಟ್ ಚಲುವಯ್ಯರವರು ರಾಮನಗರ ಜಿಲ್ಲೆ, ಹಾರೋಹಳ್ಳಿ ತಾಲ್ಲೂಕು, ಹಾರೋಹಳ್ಳಿ ಹೋಬಳಿ, ಅಣೆದೊಡ್ಡಿ ಗ್ರಾಮದಲ್ಲಿ ದಿನಾಂಕ:29.04.2013 ರಂದು ಮರಣ ಹೊಂದಿರುತ್ತಾರೆ, ಇವರ ಮರಣ ಪ್ರಮಾಣ ಪತ್ರವನ್ನು ನೀಡುವಂತೆ ಎದುರುದಾರರಿಗೆ ನಿರ್ದೇಶನ ನೀಡುವಂತೆ ಕೋರಿ ಈ ಪ್ರಕರಣವನ್ನು ಸಲ್ಲಿಸಿದ್ದು, ಇವರ ಮರಣ ದಿನಾಂಕದ ಬಗ್ಗೆ ಯಾರದಾದರೂ ತಕರಾರು ಇದ್ದರೆ ಖುದ್ದಾಗಿ ಆಗಲಿ ಅಥವಾ ಅಧಿಕಾರಕೊಟ್ಟ ವಕೀಲರ ಮುಖಾಂತರವಾಗಲೀ ನ್ಯಾಯಾಲಯ ನಿಗಧಿಪಡಿಸಿದ ದಿನಾಂಕದಂದು ಅಂದರೆ ದಿನಾಂಕ: 31/07/2025 ರ ಬೆಳಿಗ್ಗೆ ಸರಿಯಾಗಿ 11=00 ಘಂಟೆಗೆ ನ್ಯಾಯಾಲಯದ ಮುಂದೆ ಹಾಜರಾಗಿ ತಕರಾರು ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ಯಾರದ್ದೂ ತಕರಾರು ಇಲ್ಲವೆಂದು ಪರಿಗಣಿಸಿ ಉಲ್ಲೇಖಿತ ಪ್ರಕರಣವನ್ನು ಮುಂದುವರೆಸಿ ಇತ್ಯರ್ಥ ಗೊಳಿಸಲಾಗುವುದು.
2025 ರ ಜೂನ್ 23ನೇ ತಾರೀಖು ಈ ದಿವಸ ನನ್ನ ಸಹಿ ಮತ್ತು ನ್ಯಾಯಾಲಯದ ಮೊಹರಿನೊಂದಿಗೆ ಹೊರಡಿಸಲಾಗಿದೆ.

ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೆದಾರರು,
ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್.ಸಿ. ನ್ಯಾಯಾಲಯ, ಕನಕಪುರ
ಅರ್ಜಿದಾರರ ಪರ ವಕೀಲರು
ವಿನೋದ್.ಕೆ
ವಕೀಲರು, ಕನಕಪುರ
ಸ್ಥಳ : ಕನಕಪುರ
ದಿನಾಂಕ: 12/06/2025

ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಜೆ.ಎಂ.ಎಫ್.ಸಿ, ಕನಕಪುರ
ಸಿ.ಮಿಸ್.ನಂ.275/2025

ಅರ್ಜಿದಾರರು: ಶ್ರೀಮತಿ. ಜಯಮ್ಮ ಕೋಂ ಲೇಟ್ ವೆಂಕಟಯ್ಯ, ವಯಸ್ಸು 40 ವರ್ಷ ವಾಸ: #160,ಅಣೆದೊಡ್ಡಿ ಗ್ರಾಮ, ಕೊಳ್ಳಿಗನಹಳ್ಳಿ ಅಂಚೆ, ಹಾರೋಹಳ್ಳಿ ಹೋಬಳಿ, ಹಾರೋಹಳ್ಳಿ ತಾಲ್ಲೂಕು, ರಾಮನಗರ ಜಿಲ್ಲೆ. ಮತ್ತು ಇತರರು
ವಿರುದ್ಧ
ಪ್ರತಿ ಅರ್ಜಿದಾರರು: 1. ಜನನ ಮತ್ತು ಮರಣ ನೊಂದಣಿ ಅಧಿಕಾರಿಗಳು, ತಹಶೀಲ್ದಾರ್ ಹಾರೋಹಳ್ಳಿ ಹಾರೋಹಳ್ಳಿ ತಾಲ್ಲೂಕು, 2. ಗ್ರಾಮ ಲೆಕ್ಕಾಧಿಕಾರಿಗಳು, ಕೊಳ್ಳಿಗನಹಳ್ಳಿ ವೃತ್ತ, ಹಾರೋಹಳ್ಳಿ ಹೋಬಳಿ, ಹಾರೋಹಳ್ಳಿ ತಾಲ್ಲೂಕು, ರಾಮನಗರ ಜಿಲ್ಲೆ.

ಪ್ರಕಟಣೆ

ಮೇಲ್ಕಾಣಿಸಿರುವ ಅರ್ಜಿದಾರರು ಈ ಮೂಲಕ ತಿಳಿಯಪಡಿಸುವುದೇನೆಂದರೆ 1ನೇ ಅರ್ಜಿದಾರರ ಅತ್ತೆ, 2 ಮತ್ತು 3ನೇ ಅರ್ಜಿದಾರರ ಅಜ್ಜಿಯವರಾದ ಶ್ರೀಮತಿ. ಪುಟ್ಟನಂಜಮ್ಮ ಕೋಂ. ಲೇಟ್ ಮೂಡಲಯ್ಯರವರು ರಾಮನಗರ ಜಿಲ್ಲೆ, ಹಾರೋಹಳ್ಳಿ ತಾಲ್ಲೂಕು, ಹಾರೋಹಳ್ಳಿ ಹೋಬಳಿ, ಅಣೆದೊಡ್ಡಿ ಗ್ರಾಮದಲ್ಲಿ ದಿನಾಂಕ:10.07.2000 ರಂದು ಮರಣ ಹೊಂದಿರುತ್ತಾರೆ, ಇವರ ಮರಣ ಪ್ರಮಾಣ ಪತ್ರವನ್ನು ನೀಡುವಂತೆ ಎದುರುದಾರರಿಗೆ ನಿರ್ದೇಶನ ನೀಡುವಂತೆ ಕೋರಿ ಈ ಪ್ರಕರಣವನ್ನು ಸಲ್ಲಿಸಿದ್ದು, ಇವರ ಮರಣ ದಿನಾಂಕದ ಬಗ್ಗೆ ಯಾರದಾದರೂ ತಕರಾರು ಇದ್ದರೆ ಖುದ್ದಾಗಿ ಆಗಲಿ ಅಥವಾ ಅಧಿಕಾರಕೊಟ್ಟ ವಕೀಲರ ಮುಖಾಂತರವಾಗಲೀ ನ್ಯಾಯಾಲಯ ನಿಗಧಿಪಡಿಸಿದ ದಿನಾಂಕದಂದು ಅಂದರೆ ದಿನಾಂಕ: 31/07/2000 ರ ಬೆಳಿಗ್ಗೆ ಸರಿಯಾಗಿ 11=00 ಘಂಟೆಗೆ ನ್ಯಾಯಾಲಯದ ಮುಂದೆ ಹಾಜರಾಗಿ ತಕರಾರು ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ಯಾರದ್ದೂ ತಕರಾರು ಇಲ್ಲವೆಂದು ಪರಿಗಣಿಸಿ ಉಲ್ಲೇಖಿತ ಪ್ರಕರಣವನ್ನು ಮುಂದುವರೆಸಿ ಇತ್ಯರ್ಥ ಗೊಳಿಸಲಾಗುವುದು.
2025 ರ ಜೂನ್ 23ನೇ ತಾರೀಖು ಈ ದಿವಸ ನನ್ನ ಸಹಿ ಮತ್ತು ನ್ಯಾಯಾಲಯದ ಮೊಹರಿನೊಂದಿಗೆ ಹೊರಡಿಸಲಾಗಿದೆ.

ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೆದಾರರು,
ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್.ಸಿ. ನ್ಯಾಯಾಲಯ, ಕನಕಪುರ
ಅರ್ಜಿದಾರರ ಪರ ವಕೀಲರು
ವಿನೋದ್.ಕೆ
ವಕೀಲರು, ಕನಕಪುರ
ಸ್ಥಳ : ಕನಕಪುರ
ದಿನಾಂಕ: 12/06/2025

ಮಾನ್ಯ ಗೌರವಾನ್ವಿತ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ ಕನಕಪುರ
ಸಿ.ಮಿಸ್ ನಂ. 811/2024

ಅರ್ಜಿದಾರರು: ಶ್ರೀ. ವೀರಭದ್ರಯ್ಯ ಬಿನ್ ಲೇಟ್ ಶಿವಪ್ಪ ವಯಸ್ಸು 71 ವರ್ಷ ವಾಸ: ಪರುವಯ್ಯನಪಾಳ್ಯ ಗ್ರಾಮ ಹಾರೋಹಳ್ಳಿ ಹೋಬಳಿ, ಹಾರೋಹಳ್ಳಿ ತಾಲ್ಲೂಕು, ರಾಮನಗರ ಜಿಲ್ಲೆ. ಮತ್ತು ಇತರರು
V/S
ಪ್ರತಿ ಅರ್ಜಿದಾರರು: 1. ಜನನ ಮತ್ತು ಮರಣ ನೊಂದಣಿ ಅಧಿಕಾರಿಗಳು, ತಹಶೀಲ್ದಾರ್, ಕನಕಪುರ ತಾಲ್ಲೂಕು 2. ಗ್ರಾಮ ಲೆಕ್ಕಾಧಿಕಾರಿಗಳು ಹಾರೋಹಳ್ಳಿ ವೃತ್ತ ಹಾರೋಹಳ್ಳಿ ಹೋಬಳಿ, ಹಾರೋಹಳ್ಳಿ ತಾಲ್ಲೂಕು. ರಾಮನಗರ ಜಿಲ್ಲೆ.

ಪ್ರಕಟಣೆ

ಮೇಲ್ಕಾಣಿಸಿರುವ ಅರ್ಜಿದಾರರು ಈ ಮೂಲಕ ತಿಳಿಯಪಡಿಸುವುದೇನೆಂದರೆ, 1 ಮತ್ತು 2ನೇ ಅರ್ಜಿದಾರರ ತಂದೆ. ಮತ್ತು 3ನೇ ಅರ್ಜಿದಾರರ ಮಾವ, 4 ಮತ್ತು 5ನೇ ಅರ್ಜಿದಾರರ ತಾತನವರಾದ ಶ್ರೀ. ಶಿವನಪ್ಪ ಬಿನ್ ಲೇಟ್ ಶಿವನಪ್ಪರವರು. ರಾಮನಗರ ಜಿಲ್ಲೆ. ಹಾರೋಹಳ್ಳಿ ತಾಲ್ಲೂಕು, ಹಾರೋಹಳ್ಳಿ ಹೋಬಳಿ, ಪರುವಯ್ಯನಪಾಳ್ಯ ಗ್ರಾಮದಲ್ಲಿ ದಿನಾಂಕ: 10.05.1965 ರಂದು ಮರಣ ಹೊಂದಿದ್ದು, ಇವರ ಮರಣ ಪ್ರಮಾಣ ಪತ್ರವನ್ನು ನೀಡುವಂತೆ ಎದುರುದಾರರಿಗೆ ನಿರ್ದೇಶನ ನೀಡುವಂತೆ ಕೋರಿ ಈ ಪ್ರಕರಣವನ್ನು ಸಲ್ಲಿಸಿದ್ದು, ಇವರ ಮರಣ ದಿನಾಂಕದ ಬಗ್ಗೆ ಯಾರದಾದರೂ ತಕರಾರು ಇದ್ದರೆ ಖುದ್ದಾಗಿ ಅಗಲಿ ಅಥವಾ ಅಧಿಕಾರ ಕೊಟ್ಟ ವಕೀಲರ ಮುಖಾಂತರವಾಗಲೀ ನ್ಯಾಯಾಲಯ ನಿಗಧಿಪಡಿಸಿದ ದಿನಾಂಕದಂದು ಅಂದರೆ, 05/08/2025 ರ ಬೆಳಿಗ್ಗೆ ಸರಿಯಾಗಿ 11-00 ಘಂಟೆಗೆ ನ್ಯಾಯಾಲಯದ ಮುಂದೆ ಹಾಜರಾಗಿ ತಕರಾರು ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ಯಾರದ್ದೂ ತಕರಾರು ಇಲ್ಲವೆಂದು ಪರಿಗಣಿಸಿ ಉಲ್ಲೇಖಿತ ಪ್ರಕರಣವನ್ನು ಮುಂದುವರೆಸಿ ಇತ್ಯರ್ಥ ಗೊಳಿಸಲಾಗುವುದು.
2025 ರ ಜೂನ್ 23ನೇ ತಾರೀಖು ಈ ದಿವಸ ನನ್ನ ಸಹಿ ಮತ್ತು ನ್ಯಾಯಾಲಯದ ಮೊಹರಿನೊಂದಿಗೆ ಹೊರಡಿಸಲಾಗಿದೆ.

ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೇದಾರರು
ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ. ಎಫ್.ಸಿ ನ್ಯಾಯಾಲಯ, ಕನಕಪುರ
ಅರ್ಜಿದಾರರ ಪರ ವಕೀಲರು
ಸಿ.ಎಸ್.ನಾರಾಯಣ
ವಕೀಲರು, ಕನಕಪುರ
ದಿನಾಂಕ: 10.16.2025
ಕನಕಪುರ.

ಕೇತಗಾನಹಳ್ಳಿ ವ್ಯಾಪ್ತಿಯಲ್ಲಿನ ಸರಕಾರಿ ಜಮೀನು ಒತ್ತುವರಿ ಪ್ರಕರಣ

ಮಧ್ಯಂತರ ತಡೆ ಮರು ಪರಿಶೀಲನೆಗೆ ಹೈಗೆ ಮನವಿ

ಬೆಂಗಳೂರು: ರಾಮನಗರದ ಕೇತಗಾನಹಳ್ಳಿ ವ್ಯಾಪ್ತಿಯಲ್ಲಿನ ಸರಕಾರಿ ಜಮೀನುಗಳ ಒತ್ತುವರಿ ಆರೋಪಕ್ಕೆ ಸಂಬಂಧಿಸಿದ ವಿಚಾರಣೆ ನಡೆಸಲು ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಿರುವ ರಾಜ್ಯ ಸರಕಾರದ ಆದೇಶಕ್ಕೆ ನೀಡಲಾಗಿರುವ ಮಧ್ಯಂತರ ತಡೆಯನ್ನು ಮರು ಪರಿಶೀಲನೆ ನಡೆಸುವಂತೆ ಸರಕಾರ ಹೈಕೋರ್ಟ್‌ಗೆ ಮನವಿ ಮಾಡಿದೆ.

ಎಸ್‌ಐಟಿ ರಚನೆಗೆ ತಡೆ ನೀಡಿರುವ ನ್ಯಾಯಮೂರ್ತಿ ಇ.ಎಸ್.ಇಂದಿರೇಶ್ ಅವರಿದ್ದ ಏಕಸದಸ್ಯ ನ್ಯಾಯಪೀಠದ ಮುಂದೆ ಹಾಜರಾದ ಅಡ್ವೋಕೇಟ್ ಜನರಲ್ ಕೆ.ಶಶಿಕಿರಣ ಶೆಟ್ಟಿ, ಪ್ರಕರಣದಲ್ಲಿ ಸರಕಾರದ ವಾದ ಆಲಿಸದೆ ಮಧ್ಯಂತರ ತಡೆ ನೀಡಲಾಗಿದೆ. ಆದ್ದರಿಂದ, ಸರಕಾರದ ವಾದ ಆಲಿಸಿ ಸೂಕ್ತ ಆದೇಶ ಹೊರಡಿಸಬೇಕು ಎಂದು ಪೀಠಕ್ಕೆ ಮನವಿ ಮಾಡಿದರು.

ಕರ್ನಾಟಕ ಭೂ ಕಂದಾಯ ಕಾಯಿದೆ 1964ರ ಕಲಂ 195ರ ಅನುಸಾರ ರಾಜ್ಯ ಸರಕಾರಕ್ಕೆ ಎಸ್‌ಐಟಿ ರಚಿಸುವ ಅಧಿಕಾರವಿದೆ. ಅಷ್ಟಕ್ಕೂ ಹೈಕೋರ್ಟ್ ಆದೇಶಕ್ಕೆ ಅನುಗುಣವಾಗಿಯೇ ಈ ಎಸ್‌ಐಟಿ ರಚಿಸಲಾಗಿದೆ ಎಂದು ವಿವರಿಸಿದ ಅವರು, ಮಧ್ಯಂತರ ತಡೆ ಆದೇಶ ತೆರವುಗೊಳಿಸುವಂತೆ ಕೋರಿದ ಮತ್ತು ರಿಟ್ ಅರ್ಜಿಗೆ ಸಂಬಂಧಿಸಿದ ಆಕ್ಷೇಪಣೆಯನ್ನು ನ್ಯಾಯಪೀಠಕ್ಕೆ ಸಲ್ಲಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ನ್ಯಾಯಪೀಠ, ನಿಮ್ಮ ಮನವಿ ಪರಿಗಣಿಸಲಾಗುವುದು ಎಂದು ತಿಳಿಸಿ ವಿಚಾರಣೆ ಇದೇ 26ಕ್ಕೆ ಮುಂದೂಡಿತು.

ಎಸ್‌ಐಟಿ ರಚಿಸಿರುವ ಆದೇಶ ರದ್ದುಪಡಿಸಬೇಕು ಎಂದು ಕೋರಿ ಕೇಂದ್ರ ಬೃಹತ್ ಕೈಗಾರಿಕೆ ಸಚಿವ ಎಚ್.ಡಿ. ಕುಮಾರಸ್ವಾಮಿ ಸಲ್ಲಿಸಿರುವ ರಿಟ್ ಅರ್ಜಿಯನ್ನು ನ್ಯಾಯಮೂರ್ತಿ ಇ.ಎಸ್. ಇಂದಿರೇಶ್ ಅವರಿದ್ದ ಏಕಸದಸ್ಯ ನ್ಯಾಯಪೀಠ ಜೂ.19ರಂದು ವಿಚಾರಣೆ ನಡೆಸಿತ್ತು. ಅಂದು ವಿಚಾರಣೆ ವೇಳೆ ಕುಮಾರಸ್ವಾಮಿ ಪರ ವಕೀಲರು, ಎಸ್‌ಐಟಿ ರಚಿಸಿದ ಬಳಿಕ ಸರಕಾರ ಅಧಿಸೂಚನೆ ಹೊರಡಿಸಬೇಕು. ಆದರೆ, ಈ ಪ್ರಕ್ರಿಯೆ ನಡೆಸದೇ ಅರ್ಜಿದಾರ ಕುಮಾರಸ್ವಾಮಿ ಅವರಿಗೆ ಎಸ್‌ಐಟಿ ಸಮನ್ಸ್ ಜಾರಿ ಮಾಡಿದೆ. ಆದ್ದರಿಂದ, ಎಸ್‌ಐಟಿ ರಚನೆ ಕಾನೂನು ಬಾಹಿರವಾಗಿದ್ದು ಈ ಕುರಿತ ಆದೇಶ ವಜಾಗೊಳಿಸಬೇಕು ಎಂದು ಕೋರಿದ್ದರು.

ಸಮಾಚಾರ ಸಣ್ಣದಲ್ಲ

ಕರ್ನಾಟಕದ ಶತಾಯುಷಿಗಳು ಕೃತಿ ಬಿಡುಗಡೆ ಇಂದು

ಬೆಂಗಳೂರು: ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ಬುಧವಾರ ಸಂಜೆ 5.00ಗಂಟೆಗೆ ಸ್ನೇಹ ಪಬ್ಲಿಷಿಂಗ್ ಹೌಸ್ ಪ್ರಕಟಿಸಿದ ಮಹಾಮಹೋಪಾಧ್ಯಾಯ ಡಾ.ಎಸ್.ರಂಗನಾಥ್‌ರ ಕರ್ನಾಟಕದ ಶತಾಯುಷಿಗಳು ಕೃತಿ ಬಿಡುಗಡೆ ಕಾರ್ಯಕ್ರಮ ಆಯೋಜಿಸಲಾಗಿದೆ. ಕಾರ್ಯಕ್ರಮದ ಅಧ್ಯಕ್ಷತೆ ಭಾಷಾ ಸಮ್ಮಾನ್ ಪುರಸ್ಕೃತ ಹಿರಿಯ ವಿದ್ವಾಂಸ ನಾಡೋಜ ಡಾ.ಟಿ.ವಿ.ವೆಂಕಟಾಚಲಶಾಸ್ತ್ರೀ ವಹಿಸಲಿದ್ದು, ಕಸಾಪ ಅಧ್ಯಕ್ಷ ನಾಡೋಜ ಡಾ.ಮಹೇಶ ಜೋಶಿ ಕೃತಿ ಲೋಕಾರ್ಪಣೆ ಮಾಡಲಿದ್ದಾರೆ. ಸರ್ವೋಚ್ಚ ನ್ಯಾಯಾಲಯದ ನಿವೃತ್ತ ಮುಖ್ಯ ನ್ಯಾಯಾಧೀಶ ಪದ್ಮವಿಭೂಷಣ ನ್ಯಾಯಮೂರ್ತಿ ಎಂ.ಎನ್.ವೆಂಕಟಾಚಲಯ್ಯ ಉಪಸ್ಥಿತರಿರಲಿದ್ದಾರೆ. ಸಂಜೆ 4.30ಕ್ಕೆ ಹಂಸಲೇಖ ದೇಸಿ ವಿದ್ಯಾಸಂಸ್ಥೆ ವಿದ್ಯಾರ್ಥಿಗಳಿಂದ ಕವಿಗೀತ ಗಾಯನ'ದ ಕಾರ್ಯಕ್ರಮವಿರಲಿದೆ ಎಂದು ಪ್ರಕಟಣೆ ತಿಳಿಸಿದೆ.

ವಿಸ್ಮಯ ಸುಧೀರ್ ರಂಗಪ್ರವೇಶ

ಬೆಂಗಳೂರು: ಆವಾಹನಂ ಭರತನಾಟ್ಯ ಶಾಲೆಯ ವಿಸ್ಮಯ ಸುಧೀರ್ ಭರತನಾಟ್ಯ ರಂಗಪ್ರವೇಶವು ಜೂನ್ 28ರ ಸಂಹೆ 5.00 ಗಂಟೆಗೆ ಪ್ರಭಾತ್ ಕಲಾದ್ವಾರಕ ಮಂದಿರದಲ್ಲಿ ನಡೆಯಲಿದೆ. 'ಆವಾಹನಂ' ಭರತನಾಟ್ಯ ನೃತ್ಯಶಾಲೆಯ ನಾಟ್ಯಗುರು ವಿದುಷಿ. ದೀಪಾ ಎಸ್. ಮನೋಹರ್ ಶಿಷ್ಯೆಯಾದ ವಿಸ್ಮಯ ಸುಧೀರ್ ಸುಧೀರ್ ಕೃಷ್ಣ ಮತ್ತು ಚಿತ್ರಾ ದಂಪತಿಗಳ ಪುತ್ರಿ. ನಾಡಿನ ಬಹುತೇಕ ವೇದಿಕೆಗಳಲ್ಲಿ ತನ್ನ ಕಲಾ ಪ್ರದರ್ಶನ ನೀಡಿ ಕಲಾರಸಿಕರ ಮೆಚ್ಚುಗೆ ಪಡೆದಿದ್ದು, ಕಳೆದ ಮೂರು ವರ್ಷಗಳ ಹಿಂದೆ ಗೆಜ್ಜೆಪೂಜೆ'ಯನ್ನು ನೆರವೇರಿಸಿಕೊಂಡಿದ್ದಾಳೆ.



ಇಂದು, ನಾಳೆ ವಿದ್ಯುತ್ ವ್ಯತ್ಯಯ

ಬೆಂಗಳೂರು: ನಗರದ ಆಡುಗೋಡಿ ಮತ್ತು ಆಸ್ಟಿನ್ ಟೌನ್ ಉಪಕೇಂದ್ರದಲ್ಲಿ ನಿರ್ವಹಣಾ ಕಾಮಗಾರಿ ಹಿನ್ನೆಲೆ ಬುಧವಾರ ಹಾಗೂ ಗುರುವಾರ ಬೆಳಗ್ಗೆ 10.00 ರಿಂದ 3.00 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ. ನಗರದ ಆಡುಗೋಡಿ, ಸಲಾಪುರಿಯಾ ಟವರ್, ಬಿಗ್ ಬಜಾರ್, ಆರ್ಕೆಂಚರ್, ಕೆ.ಎಮ್.ಎಫ್, ಗೋಡೌನ್, ನಂಜಪ್ಪ ಲೇಔಟ್, ನ್ಯೂ ಮೈಕೋ ರಸ್ತೆ, ಚಿಕ್ಕಲಕ್ಷ್ಮೀ ಲೇಔಟ್, ಮಹಲಿಂಗೇಶ್ವರ ಬಡಾವಣೆ, ಬೆಂಗಳೂರು ಡೈರಿ, ರಂಗದಾಸಪ್ಪ ಲೇಔಟ್, ಲಕ್ಕಸಂದ್ರ, ಬೃಂದಾವನ ಸ್ಲಮ್, ಲಾಲ್ ಜಿ ನಗರ, ಶಾಮಣ್ಣ ಗಾಡನ್, ಪೊಲೀಸ್ ವಸತಿ ಗೃಹಗಳು ಮತ್ತು ಸುತ್ತಮುತ್ತಲ ಪ್ರದೇಶಗಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಗುರುವಾರ ಬಿ.ಎಂ.ಟಿ.ಸಿ ಉಪಕೇಂದ್ರ ನಿರ್ವಹಣಾ ಕಾಮಗಾರಿ ನಿಮಿತ್ತ ಬೆಳಗ್ಗೆ 10.00ರಿಂದ 3.00 ಗಂಟೆಯವರೆಗೆ ವಿಲ್ಸನ್ ಗಾರ್ಡನ್, ಹೊಂಬೆಗೌಡ ನಗರ, ಸಂಪಂಗಿರಾಮ ನಗರ, ಜೆ.ಸಿ. ರಸ್ತೆ, ಶಾಂತಿನಗರ, ಬಿಟಿಎಸ್ ರಸ್ತೆ, ರಿಚ್ ಮಂಡ್ ಸರ್ಕಲ್, ರೆಸಿಡೆನ್ಸಿ ರೋಡ್, ವಿಲ್ಸನ್ ಗಾರ್ಡನ್, ಡಬಲ್ ರೋಡ್, ಸುಬ್ಬಯ್ಯ ಸರ್ಕಲ್ ಸಿದ್ದಯ್ಯ ರಸ್ತೆ, ಲಾಲ್ ಬಾಗ್ ರಸ್ತೆ ಮತ್ತು ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ನಾಳೆ ನೀರಿನ ಅದಾಲತ್

ಬೆಂಗಳೂರು: ಬೆಂಗಳೂರು ಜಲಮಂಡಳಿ ವತಿಯಿಂದ ಗುರುವಾರ ಬೆಳಗ್ಗೆ 9.30ರಿಂದ 11.00 ಗಂಟೆಯವರೆಗೆ ನೀರಿನ ಅದಾಲತ್ ನ್ನು ಆಯೋಜಿಸಿದೆ ಎಂದು ಮಂಡಳಿ ತಿಳಿಸಿದೆ. ನಗರದ (ಆಗ್ನೆಯ-3), (ಆಗ್ನೇಯ-6) (ಪಶ್ಚಿಮ-1-3),(ವಾಯುವ್ಯ-5),(ಉತ್ತರ-2-3),(ದಕ್ಷಿಣ-1-3), (ನೈಋತ್ಯ 3) (ನೈಋತ್ಯ-6) ಮತ್ತು (ಪೂರ್ವ-2-4) ಉಪ ವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆ ಗಳನ್ನು ಪರಿಹರಿಸಲು ಸಾರ್ವಜನಿಕರು ಮಂಡಳಿಯ 24/7 ದೂರು ನಿರ್ವಹಣಾ ಕೇಂದ್ರದ ಸಹಾಯ ವಾಣಿ 1916ಗೆ ಕರೆ ಮಾಡಿ ಅಥವಾ ವಾಟ್ಸ್ ಅಪ್ ನಂಬರ್ 8762228888 ಸಂದೇಶದ ಮೂಲಕ ದೂರು ದಾಖಲಿಸಬಹುದು ಎಂದು ಮಂಡಳಿ ತಿಳಿಸಿದೆ.



ವಿರಾಮ
ಪ್ರತಿ ಭಾನುವಾರ

{ಸಿ.ಟಿ.ರವಿ} ಪರಿಷತ್ ಸದಸ್ಯ

ಭ್ರಷ್ಟಾಚಾರ ಬಿಟ್ಟು ಕಾಂಗ್ರೆಸ್ ಇಲ್ಲ. ಕಾಂಗ್ರೆಸ್ ಬಿಟ್ಟು ಭ್ರಷ್ಟಾಚಾರ ಇಲ್ಲ. ಕಾಂಗ್ರೆಸ್ ಮತ್ತು ಭ್ರಷ್ಟಾಚಾರ ಒಂದು ನಾಣ್ಯದ 2 ಮುಖಗಳು. ಅಂಗೈ ಹುಣ್ಣಿಗೆ ಕನ್ನಡಿ ಹಿಡಿಯುವ ಅವಶ್ಯಕತೆ ಇಲ್ಲವೋ ಹಾಗೆ ಕಾಂಗ್ರೆಸ್ ಭ್ರಷ್ಟಾಚಾರ ನೋಡುವುದಕ್ಕೆ ನಾವು ಸ್ಕ್ಯಾನ್ ಮಾಡುವ ಅವಶ್ಯಕತೆ ಇಲ್ಲ. ಕಣ್ಣಿಗೆ ಕಾಣುತ್ತದೆ.

ವಸತಿ ಇಲಾಖೆ ಭ್ರಷ್ಟಾಚಾರಕ್ಕೆ ಸಂಬಂಧಿಸಿದಂತೆ ಸಚಿವ ಜಮೀರ್ ತಿರುಗೇಟು | ನನ್ನ ಪಾತ್ರ ಇರುವುದು ಸಾಬೀತಾದರೆ ಖುದ್ದು ರಾಜೀನಾಮೆ

ಬಡವರ ಹಣ ತಿನ್ನುವ ದರಿದ್ರ ಬಂದಿಲ್ಲ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ವಸತಿ ಹಂಚಿಕೆ ವಿಚಾರದ ಭ್ರಷ್ಟಾಚಾರ ಆರೋಪದಲ್ಲಿ ನನ್ನ ಕೈವಾಡ ಇದ್ದರೆ ನೂರಕ್ಕೆ ನೂರರಷ್ಟು ರಾಜೀನಾಮೆ ನೀಡುತ್ತೇನೆ. ಬಡವರ ಮನೆಯ ಹಣ ಪಡೆಯುವಷ್ಟು ದರಿದ್ರ ನನಗೆ ಬಂದಿಲ್ಲ ಎಂದು ವಸತಿ ಸಚಿವ ಜಮೀರ್ ಅಹಮದ್ ಖಾನ್ ತಿರುಗೇಟು ನೀಡಿದ್ದಾರೆ.

ತಮ್ಮ ಸರಕಾರಿ ನಿವಾಸದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಬಡವರಿಗೆ ಮನೆ ಹಂಚಿಕೆ ಮಾಡಲು ನಾನು ಹಣ ಪಡೆದಿರುವುದು ಸಾಬೀತು ಮಾಡಿದರೆ ಬೇರೆಯವರು ಕೇಳುವುದು ಬೇಡ ನಾನೇ ಸ್ವಯಂ ಪ್ರೇರಿತವಾಗಿ ರಾಜೀನಾಮೆ ಕೊಡಲು ಸಿದ್ಧ. ಬಡವರ ಮನೆಗೆ ಹಣ ಪಡೆಯುವುದು ಅಕ್ಷಮ್ಯ ಅಪರಾಧ. ಅದಕ್ಕೆ ನಮ್ಮ ಇಲಾಖೆಯಲ್ಲಿ ಅವಕಾಶ ಇಲ್ಲ. ಹಿರಿಯ ಶಾಸಕರಾದ ಬಿ.ಆರ್.ಪಾಟೀಲ್ ಅವರು ಮಾಡಿರುವ ಆರೋಪ ಸಂಬಂಧ ಇಲಾಖಾ ತನಿಖೆಗೆ ಆದೇಶಿಸಲಾಗುವುದು. ತನಿಖೆ ನಂತರ ಯಾರಾದರೂ ತಪ್ಪು ಮಾಡಿದ್ದರೆ ಕಠಿಣ ಕ್ರಮ ಕೈಗೊಳ್ಳ ಲಾಗುವುದು. ಬಿ.ಆರ್. ಪಾಟೀಲರ ಜತೆಯೂ ಮಾತನಾಡುತ್ತೇನೆ ಎಂದರು.

ಬಿ.ಆರ್.ಪಾಟೀಲ್ ಸಹ ಸಚಿವರು ಹಣ ಪಡೆದಿದ್ದಾರೆ ಎಂದು ಹೇಳಿಲ್ಲ. ಅಧಿಕಾರಿಗಳ ಹೆಸರು ಸಹ ಹೇಳಿಲ್ಲ. ಪಂಚಾಯಿತಿಯಲ್ಲಿ ಯಾರಾದರೂ ಹಣ ಪಡೆದಿದ್ದರೆ ಮಾಹಿತಿ ಕೊಟ್ಟರೆ ಕ್ರಮ ಕೈಗೊಳ್ಳಲಾಗುವುದು. ಮುಖ್ಯಮಂತ್ರಿಯವರಿಗೂ ಈ ವಿಚಾರದ ಬಗ್ಗೆ ಎಲ್ಲ ಮಾಹಿತಿ ತಿಳಿಸಿದ್ದೇನೆ. ನಾನು ಪ್ರವಾಸದಲ್ಲಿದ್ದ ಕಾರಣ ಮಾತನಾಡಲು ಸಾಧ್ಯವಾಗಿರಲಿಲ್ಲ. ಇದೀಗ ಅಧಿಕಾರಿಗಳ ಸಭೆ ಕರೆದು ಮಾಹಿತಿ ಪಡೆದುಕೊಂಡಿದ್ದೇನೆ ಎಂದರು.

ಶಾಸಕ ಬೇಳೂರು ಗೋಪಾಲಕೃಷ್ಣ ರಾಜೀನಾಮೆಗೆ ಆಗ್ರಹ ಮಾಡಿರುವ ಬಗ್ಗೆ ಮಾಹಿತಿ ಇಲ್ಲ. ಅವರಿಗೆ ವಾಸ್ತವದ ಮಾಹಿತಿ ಇಲ್ಲ. ಮನೆ ಹಂಚಿಕೆ ವಿಚಾರದಲ್ಲಿ ನಮ್ಮ ಪಾತ್ರವೇ ಇರುವುದಿಲ್ಲ. ಫಲಾನುಭವಿ ಆಯ್ಕೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ನಡೆಯುತ್ತದೆ. ಶಾಸಕರ ಪತ್ರದ ಆಧಾರದಲ್ಲೇ ಮನೆ ಹಂಚಿಕೆ ಮಾಡಲಾಗುವುದು. ಆಳಂದ ಕ್ಷೇತ್ರಕ್ಕೂ ಬಿ.ಆರ್. ಪಾಟೀಲ್ ಅವರ ಪತ್ರದ ಆಧಾರದಲ್ಲೇ ನೀಡಲಾಗಿದೆ. 950 ಮನೆ ಹಂಚಿಕೆ ಮಾಡಲಾಗಿದೆ. ಅವರು ಯಾವ ಪಂಚಾಯತಿ ಅಂತ ಹೇಳಬೇಕು. ಪಂಚಾಯತಿ ಭ್ರಷ್ಟಾಚಾರ ನಮಗೆ ಹೇಗೆ ಗೊತ್ತಾಗುತ್ತದೆ. ಅವರ ಕ್ಷೇತ್ರದ ಪಂಚಾಯತಿ ಬಗ್ಗೆ ಪಾಟೀಲ್ ಅವರೇ ಹೇಳಬೇಕು. ನಾನು ಸತ್ಯಹರಿಶ್ಚಂದ್ರ ಎಂದರು.

ಸುದ್ದಿಗೋಷ್ಠಿಯಲ್ಲಿ ವಸತಿ ಸಚಿವ ಜಮೀರ್ ಅಹಮದ್ ಖಾನ್ ಮಾತನಾಡಿದರು.

9 ಲಕ್ಷ ಮನೆಗಳ ನಿರ್ಮಾಣ

ನಾಲ್ಕು ವರ್ಷದಿಂದ ಹೊಸ ಮನೆಗಳನ್ನು ಕೊಟ್ಟಿಲ್ಲ. ಈಗ 9 ಲಕ್ಷ ಮನೆಗಳ ನಿರ್ಮಾಣ ಆಗುತ್ತಿದೆ. ನಾನು ಈ ಬಗ್ಗೆ ಸಿಎಂ ಅವರ ಗಮನಕ್ಕೆ ತಂದೆ. ಬಜೆಟ್‌ನಲ್ಲಿ ಘೋಷಣೆ ಮಾಡಲು ಮನವಿ ಮಾಡಿದ್ದೆ. ಸಿಎಂ ಅವರು ಕೂಡ ಒಪ್ಪಿದ್ದರು. ಆದರೆ, ಆರ್ಥಿಕ ಇಲಾಖೆ ಬೇಡ ಅಂತ ಹೇಳಿತ್ತು. ಸದ್ಯ 9 ಲಕ್ಷ ಮನೆಗಳ ಕೆಲಸ ನಡೆಯುತ್ತಿದೆ. ಅವು ಮುಗಿಯುವವರೆಗೂ ಹೊಸ ಮನೆ ಘೋಷಣೆ ಮಾಡುವುದು ಬೇಡ ಎಂದುಕೊಂಡಿದ್ದೇವೆ ಎಂದು ಮಾಹಿತಿ ನೀಡಿದರು.

ಹುಳ ಬಿದ್ದು ಸಾಯುತ್ತೇವೆ

ಒಂದು ವೇಳೆ ನಾನು ಹಣ ತಿಂದಿದ್ದರೆ ಬಿಜೆಪಿಗರು ಹೇಳುವುದೇ ಬೇಡ ನಾನೇ ರಾಜೀನಾಮೆ ನೀಡುತ್ತೇನೆ. ಯಾರ ಬಳಿಯೂ ನಾವು ದುಡ್ಡು ಪಡೆದು ಮನೆ ಕೊಟ್ಟಿಲ್ಲ. ರಾಮನಗರಕ್ಕೆ ಕೂಡ ಮನೆ ಕೊಟ್ಟಿದ್ದೇವೆ. ಎಲ್ಲರಿಗೂ ಮನೆ ಕೊಟ್ಟಿದ್ದೇವೆ. ದುಡ್ಡು ಪಡೆದು ಮನೆ ಕೊಟ್ಟರೆ ಹುಳ ಬಿದ್ದು ಸಾಯುತ್ತೇವೆ. ಬಡವರ ಹಣ ಪಡೆದ್ರೆ ನಮ್ಮ ಮಕ್ಕಳಿಗೆ ಒಳ್ಳೆಯದಾಗುತ್ತಾ?. ಯಾರು ಹಣ ಪಡೆದಿದ್ದಾರೆ ಎಂದು ಪಾಟೀಲ್ ಹೇಳಲಿ. ಅವರ ಮೇಲೆ ಕ್ರಮ ತೆಗೆದುಕೊಳ್ಳೋಣ. ಪ್ರಧಾನ ಮಂತ್ರಿ ಆವಾಜ್ ಯೋಜನೆಯಲ್ಲಿ ಕೇಂದ್ರ ಸರಕಾರ 1.50 ಲಕ್ಷ ರು. ಮಾತ್ರ ನೀಡುತ್ತದೆ. ರಾಜ್ಯ ಸರಕಾರ ಕೂಡ ಒಂದೂವರೆ ಲಕ್ಷ ಕೊಡುತ್ತದೆ. ಇದಕ್ಕೆ ಕೇಂದ್ರ ಸರಕಾರ ಜಿಎಸ್‌ಟಿ ಹಾಕಿದೆ. ಜಿಎಸ್‌ಟಿ ಬಿಡುವಂತೆ ಕೇಂದ್ರ ಸರಕಾರಕ್ಕೆ ಕೇಳಿದ್ದೆವು. ಬಾಕಿ ಹಣ ಫಲಾನುಭವಿಗಳು ನೀಡಬೇಕು. ಆದರೆ ಫಲಾನುಭವಿಗಳ ಹಣ ಸಮರ್ಪಕವಾಗಿ ಬಂದಿಲ್ಲ. ಹೀಗಾಗಿ ಮನೆಗಳು ಕಂಪ್ಲೀಟ್ ಆಗಿಲ್ಲ. ಸರಕಾರವೇ ದುಡ್ಡು ಹಾಕಿ ಮನೆ ಸಿದ್ದಪಡಿಸಲಾಗುತ್ತಿದೆ. ಮುಂದಿನ ತಿಂಗಳು 42 ಸಾವಿರ ಮನೆಗಳನ್ನು ಕೋಡುತ್ತೇವೆ ಎಂದರು.

ಭ್ರಷ್ಟಾಚಾರವನ್ನು ಬಿಜೆಪಿಯವರು ಸಾಬೀತು ಮಾಡಲಿ. ನಾನು ರಾಜಕೀಯ ನಿವೃತ್ತಿ ಪಡೆಯುತ್ತೇನೆ. ಇವತ್ತು ಬಿಜೆಪಿಗರು ಮಾತನಾಡುತ್ತಿದ್ದಾರೆ. ಬಡವರ ಮೇಲೆ ಬಿಜೆಪಿಗರಿಗೆ ಕಾಳಜಿ ಇಲ್ಲ. ಯಾರು ದುಡ್ಡು ಪಡೆದು ಮನೆ ಕೊಟ್ಟಿದ್ದಾರೆ ಅಂತ ಹೇಳಬೇಕು. ಈ ಬಗ್ಗೆ ತನಿಖೆಯಾಗಬೇಕು. ಸಿಎಂ ಅವರಿಗೆ ಪತ್ರ ಬರೆಯಲಿ. ಸಿಬಿಐ ತನಿಖೆಯಾಗಲಿ.

-ಜಮೀರ್ ಅಹ್ಮದ್, ವಸತಿ ಸಚಿವ

ವೈದ್ಯ ಸಾಹಿತ್ಯ ಕೃತಿಯ ಲೋಕಾರ್ಪಣೆ ನಾಳೆ

ಬೆಂಗಳೂರು: ನಗರದ ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀಕೃಷ್ಣರಾಜ ಪರಿಷತ್ ಮಂದಿರ ಸಭಾಂಗಣದಲ್ಲಿ ಜೂ.26ರ ಸಂಜೆ 5.30ಕ್ಕೆ ವೈದ್ಯಕೀಯ ಕ್ಷೇತ್ರದಲ್ಲಿನ ನೂತನ ತಂತ್ರಜ್ಞಾನಗಳು ವೈದ್ಯ ಸಾಹಿತ್ಯ ಕೃತಿಯ ಲೋಕಾರ್ಪಣೆ ಕಾರ್ಯಕ್ರಮ ಆಯೋಜಿಸಲಾಗಿದೆ.

ಪುಸ್ತಕ ಲೋಕಾರ್ಪಣೆಯನ್ನು ಸಂಸದ ಡಾ. ಸಿ ಎನ್ ಮಂಜುನಾಥ್ ಮಾಡಲಿದ್ದು, ನಿವೃತ್ತ ಡಿಜಿಪಿ ಗುರುಪ್ರಸಾದ್ ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಮಹೇಶ್ ಜೋಶಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಕೃತಿಯ ಸಂಪಾದಕ, ಹಿರಿಯ ನರರೋಗ ತಜ್ಞ ಹಾಗೂ ವೈದ್ಯ ಸಾಹಿತಿ ಡಾ. ಸೂರ್ಯನಾರಾಯಣ ಶರ್ಮ ಮತ್ತು ಅಪೋಲೋ ಆಸ್ಪತ್ರೆ ಬನ್ನೇರುಘಟ್ಟ ರಸ್ತೆ ಸಂಸ್ಥೆ ಈ ಕಾರ್ಯಕ್ರಮವನ್ನು ಆಯೋಜಿಸಿದ್ದಾರೆ. ವೈದ್ಯಕೀಯ ಕ್ಷೇತ್ರದಲ್ಲಿ ನಡೆಯುತ್ತಿರುವ ತಂತ್ರಜ್ಞಾನ ಕ್ರಾಂತಿ ಹಾಗೂ ವಿವಿಧ ಗಂಭೀರ ಕಾಯಿಲೆಗಳಲ್ಲಿ ಚಿಕಿತ್ಸೆ ನೀಡಲು ತಂತ್ರಜ್ಞಾನದ ಬಳಕೆಯನ್ನು ಕುರಿತು ಸಾರ್ವಜನಿಕರಿಗೆ ಹಾಗೂ ವೈದ್ಯರಿಗೆ ಹೆಚ್ಚಿನ ಮಾಹಿತಿಯನ್ನು ಈ ಪುಸ್ತಕ ನೀಡುತ್ತದೆ. ಈ ಕೃತಿಯಲ್ಲಿ ತುರ್ತು ಚಿಕಿತ್ಸೆಯ ಘಟಕದಲ್ಲಿ ತಂತ್ರಜ್ಞಾನದ ಬಳಕೆ, ಪ್ರಯೋಗಾಲಯದಲ್ಲಿ ತಂತ್ರಜ್ಞಾನದ ಉಪಯೋಗ, ಆಸ್ಪತ್ರೆಯ ಕಾರ್ಯ ನಿರ್ವಹಣೆಯಲ್ಲಿ ಕೃತಕ ಬುದ್ಧಿಮತ್ತೆಯ ಬಳಕೆ, ರೋಬೋಟಿಕ್ ಶಸ್ತ್ರ ಚಿಕಿತ್ಸೆ, ಹೃದಯಾಘಾತದಲ್ಲಿ ನೂತನ ಚಿಕಿತ್ಸಾ ವಿಧಾನಗಳು, ವಿಕಿರಣ ಚಿಕಿತ್ಸೆಯಲ್ಲಿ ನೂತನ ತಂತ್ರಜ್ಞಾನಗಳು, ನಿರ್ದೇಶಿತ ಶಸ್ತ್ರಚಿಕಿತ್ಸೆಗಳು ಮತ್ತಿತರ 17 ವಿವಿಧ ವಿಷಯಗಳ ಬಗ್ಗೆ ಹೆಚ್ಚಿನ ಮಾಹಿತಿ ನೀಡಲಾಗಿದೆ.

ಲೈಂಗಿಕ ದೌರ್ಜನ್ಯ: ಟೆಕ್ಕಿ ಸೆರೆ

ಬೆಂಗಳೂರು: ಕಬ್ಬನ್ ಪಾರ್ಕ್ ಬಳಿಯ ಪಬ್‌ವೊಂದರಲ್ಲಿ ಯುವತಿಯೊಬ್ಬಳ ಮೇಲೆ ಲೈಂಗಿಕ ದೌರ್ಜನ್ಯಕ್ಕೆ ಯತ್ನಿಸಿದ ಆರೋಪದಲ್ಲಿ ಟೆಕ್ಕಿಯೊಬ್ಬನನ್ನು ಪೊಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಯನ್ನು ಅನುರಾಗ್ ಎಂದು ಗುರುತಿಸಲಾಗಿದೆ.

ತೀವ್ರ ಅನಾರೋಗ್ಯದಿಂದ ಆಸ್ಪತ್ರೆಗೆ ದಾಖಲಾಗಿರುವ ಹಿರಿಯ ಸಾಹಿತಿ, ವಿಧಾನಪರಿಷತ್ ಮಾಜಿ ಸದಸ್ಯ ಪ್ರೊ. ದೊಡ್ಡರಂಗೇಗೌಡ ಅವರನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಭೇಟಿಯಾಗಿ ಆರೋಗ್ಯ ವಿಚಾರಿಸಿದರು.

ದೊಡ್ಡರಂಗೇಗೌಡರ ಆರೋಗ್ಯ ವಿಚಾರಿಸಿದ ಸಚಿವ ತಂಗಡಗಿ

ಬೆಂಗಳೂರು: ತೀವ್ರ ಅನಾರೋಗ್ಯದಿಂದ ಆಸ್ಪತ್ರೆಗೆ ದಾಖಲಾಗಿರುವ ಹಿರಿಯ ಸಾಹಿತಿ, ವಿಧಾನಪರಿಷತ್ ಮಾಜಿ ಸದಸ್ಯ ಪ್ರೊ. ದೊಡ್ಡರಂಗೇಗೌಡ ಅವರನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಭೇಟಿಯಾಗಿ ಆರೋಗ್ಯ ವಿಚಾರಿಸಿದರು.

ದೊಡ್ಡರಂಗೇಗೌಡ ಅವರು ಕೆಂಗೇರಿಯಲ್ಲಿರುವ ಗ್ಲನೆಗಲ್ ಬಿಜಿಎಸ್ ಆಸ್ಪತ್ರೆಯ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಆಸ್ಪತ್ರೆಯ ವೈದ್ಯರಲ್ಲಿ ದೊಡ್ಡರಂಗೇಗೌಡರ ಆರೋಗ್ಯ ಪರಿಸ್ಥಿತಿ ಬಗ್ಗೆ ಮಾಹಿತಿ ಪಡೆದ ಸಚಿವ ಶಿವರಾಜ ತಂಗಡಗಿ ಅವರು ಮುಖ್ಯಮಂತ್ರಿಗಳ ಸೂಚನೆಯ ಮೇರೆಗೆ ವೈದ್ಯಕೀಯ ವೆಚ್ಚವನ್ನು ಸರಕಾರವೇ ಭರಿಸಲಿದೆ ಎಂದು ತಿಳಿಸಿದರು. ಅವರಿಗೆ ಅಗತ್ಯವಿರುವ ಎಲ್ಲಾ ವೈದ್ಯಕೀಯ ಸೌಲಭ್ಯವನ್ನು ಒದಗಿಸಲು ಸೂಚಿಸಿದರು.

ಪ್ರೊ.ದೊಡ್ಡ ರಂಗೇಗೌಡರ ಕುಟುಂಬ ಸದಸ್ಯರನ್ನು ಸಹ ಭೇಟಿ ಮಾಡಿ, ದೊಡ್ಡರಂಗೇಗೌಡರು ಕನ್ನಡ ಸಾಂಸ್ಕೃತಿಕ ಲೋಕದ ಆಸ್ತಿ. ಅವರ ಬಗ್ಗೆ ಅಪಾರವಾದ ಕಾಳಜಿ ಇದೆ. ಸರಕಾರದಿಂದ ಅವರಿಗೆ ಎಲ್ಲ ರೀತಿಯ ನೆರವನ್ನು ನೀಡುವುದಾಗಿ ತಿಳಿಸಿದರು.

133 ಕಾರ್ನರ್, ಮಧ್ಯಂತರ ಸೈಟ್‌ಗಳ ಹರಾಜು

ಬೆಂಗಳೂರು: ಬಿಡಿಎಯು ಇ-ಹರಾಜಿನ ಮೂಲಕ 133 ಮೂಲೆ ಅಥವಾ ಮಧ್ಯಂತರ ನಿವೇಶನಗಳ ಮಾರಾಟಕ್ಕೆ ಮುಂದಾಗಿದ್ದು, ಜುಲೈ 19 ಕ್ಕೆ ಇ-ಹರಾಜು ಹಾಗೂ 21ರಂದು ನೇರ ಹರಾಜು ನಡೆಸಲಿದೆ.

ಬಿಡಿಎ ಇ-ಹರಾಜು ಹಾಗೂ ನೇರ ಹರಾಜು ಪ್ರಕ್ರಿಯೆಯನ್ನು ಆರಂಭಿಸಲಿದ್ದು, ಯಾವುದೇ ತಕರಾರು ಇಲ್ಲದ, ಸೂಕ್ತ ನಿವೇಶನ ಇದಾಗಿರಲಿದ್ದು, ಆಸಕ್ತರು ಭಾಗವಹಿಸಬಹುದು. ಒಟ್ಟು 133 ಕಾರ್ನರ್ ಸೈಟ್‌ಗಳನ್ನು ಹರಾಜು ಮೂಲಕ ಮಾರಾಟಕ್ಕೆ ಗುರುತಿಸಿದೆ. ಈ ನಿವೇಶನಗಳ ಮಾರಾಟವನ್ನು ಇ-ಹರಾಜಿನಲ್ಲಿ ಮುಂದಿನ ತಿಂಗಳ ಜುಲೈ 19 ರಂದು ನಡೆಸಲಿದ್ದು, ಜುಲೈ 21ರಂದು ನೇರ (ಲೈವ್) ಹರಾಜು ನಡೆಸಲಿದೆ. ಈ ದಿನಾಂಕವೇ ಕೊನೆ ದಿನವಾಗಿದ್ದು, ನಿಗದಿತ ದಿನಾಂಕದಲ್ಲಿ ಬಂದು ಬಿಡ್ ಮಾಡಬಹುದಾಗಿದೆ. ಬಿಡಿಎಯ ವಿವಿಧ ಬಡಾವಣೆಗಳಲ್ಲಿ ನಿವೇಶನ ಗಳನ್ನು ಗುರುತಿಸಿದ್ದು, ಅಂಜನಾಪುರ ಟೌನ್‌ಶಿಪ್, ಜೆಪಿ ನಗರ 9 ನೇ ಹಂತ, ಸರ್ ಎಂ ವಿಶ್ವೇಶ್ವರಯ್ಯ, ನಾಗರಭಾವಿ 2 ನೇ ಹಂತ, ಬಿಟಿಎಂ 4 ನೇ ಹಂತ, ಬನಶಂಕರಿ 3 ನೇ ಹಂತ, ಆಸ್ಟಿನ್ ಟೌನ್, ಎಚ್‌ಬಿಆರ್ 1 ನೇ ಹಂತ 2 ನೇ ಬ್ಲಾಕ್, ಜಕ್ಕೂರಿನ ಅರ್ಕಾವತಿ ಲೇಔಟ್ 7 ನೇ ಬ್ಲಾಕ್ ಸೇರಿದಂತೆ ಇತರ ಕಡೆಗಳಲ್ಲಿ ನಿವೇಶನಗಳನ್ನು ಮಾರಾಟಕ್ಕೆ ಗುರುತಿಸಲಾಗಿದೆ. ಒಟ್ಟು 600 ಚದರ ಅಡಿಗಳಿಂದ ಸುಮಾರು 4,500 ಚದರ ಅಡಿಗಳವರೆಗೆ ಬೇರೆ ಬೇರೆ ಮತ್ತು ಭಿನ್ನ ಆಯಾಮಗಳ ನಿವೇಶನಗಳು ಇಲ್ಲಿ ಲಭ್ಯ ಇವೆ.

ಅನುದಾನದ ಕೊರತೆಯಿಲ್ಲ; ತಮಾಷೆಗೆ ಎಂದಿದ್ದೆ

ಬೆಂಗಳೂರು: ಕಾರ್ಯಕ್ರಮದಲ್ಲಿ ಒಂದರಲ್ಲಿ 'ದುಡ್ಡಿಲ್ಲ' ಎನ್ನುವ ಗೃಹ ಸಚಿವ ಪರಮೇಶ್ವರ ಅವರ ಹೇಳಿಕೆ ತೀವ್ರ ವಿವಾದಕ್ಕೆ ಕಾರಣವಾಗುತ್ತಿದ್ದಂತೆ, ತಮಾಷೆಗೆ ಹೇಳಿದ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಲಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದುಡ್ಡಿಲ್ಲ ಅಂತ ಯಾರು ಹೇಳಿದ್ದು?. ನಾನು ತಮಾಷೆಗೆ ಹೇಳಿದ್ದೇನೆ ಅಷ್ಟೇ. ಮುಖ್ಯಮಂತ್ರಿಗಳು 4.9 ಲಕ್ಷ ಕೋಟಿ ಬಜೆಟ್ ಮಾಡಿದ್ದಾರೆ? ನಾನು ಸರಕಾರದ ಬಳಿ ದುಡ್ಡಿಲ್ಲ ಅಂತ ಹೇಳಿಲ್ಲ. ಯಾವುದೇ ರೀತಿಯ ಆರ್ಥಿಕ ಮುಗ್ಗಟ್ಟಿಲ್ಲ. ಹಣ ಬಿಡುಗಡೆ ಸ್ವಲ್ಪ ನಿಧಾನ ಆಗಿರಬಹುದು. ಡಿಪಿಆರ್ ಮಾಡುವುದರಲ್ಲಿ ತಡವಾಗಿರಬಹುದು ಎಂದು ಹೇಳಿದರು.

ಕಾಂಗ್ರೆಸ್ ಶಾಸಕರ ಅಸಮಾಧಾನಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಅವರು, ಕೆಲ ಕ್ಷೇತ್ರಗಳಿಗೆ ಅನುದಾನ ಬಂದಿಲ್ಲ ಎನ್ನುವ ಮಾತಿದೆ. ಕೆಲ ಶಾಸಕರು ಹೇಳಿರೋದನ್ನು ನಾನು ಗಮನಿಸಿದ್ದೇನೆ. ಯಾರಿಗೆ ಆಗಲಿ ಅನುದಾನ ಇಲ್ಲ ಎಂದರೆ ಕಷ್ಟವಾಗುತ್ತದೆ. ಆ ಸಮಯದಲ್ಲಿ ಈ ಬೇಸರವಾಗುವುದು ಸಹಜ. ಇದರಿಂದಾಗಿ ಕೆಲ ಶಾಸಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮುಖ್ಯಮಂತ್ರಿಗಳು ಈ ಎಲ್ಲದರ ಬಗ್ಗೆ ಗಮನಹರಿಸುತ್ತಾರೆ ಎಂದು ಸ್ಪಷ್ಟಪಡಿಸಿದರು.

ಗಾಂಜಾ ಗಿರಾಕಿಗಳಿಂದ ಯುವತಿ ಮೇಲೆ ಹಲ್ಲೆ ವಿಚಾರವಾಗಿ ಮಾತನಾಡಿ, ಇಂತಹ ಘಟನೆಗಳನ್ನು ಲಘುವಾಗಿ ಪರಿಗಣಿಸಲ್ಲ. ಕೂಡಲೇ ಪ್ರಕರಣ ದಾಖಲಿಸಿ ಬಂಧಿಸಲಾಗುವುದು. ಕೂಡಲೇ ಕ್ರಮ ತೆಗೆದುಕೊಳ್ಳುವ ಕೆಲಸವಾಗಿದೆ. ಇವು ಸಮಾಜದ ಮೇಲೆ ಪರಿಣಾಮ ಬೀರುತ್ತವೆ. ಹಾಗಾಗಿ ನಾವು ಗಂಭೀರವಾಗಿ ತೆಗೆದುಕೊಂಡಿದ್ದೇವೆ. ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರಕ್ಕೆ ಸಲ್ಲಿಕೆಯಾಗಿರುವ ವರದಿಯಲ್ಲಿ ಪೊಲೀಸ್ ವೈಫಲ್ಯ ಅಂತ ವರದಿಯಲ್ಲಿ ಉಲ್ಲೇಖವಾಗಿದೆ. ನಾನು ಆ ವರದಿಯನ್ನು ನೋಡಿಲ್ಲ. ಯಾವ ಅರ್ಥದಲ್ಲಿ ಆ ರೀತಿ ಹೇಳಿದ್ದಾರೆ ಗೊತ್ತಿಲ್ಲ. ಏನಿದೆ ನೋಡಬೇಕು. ಮಾಧ್ಯಮಗಳಲ್ಲೇ ನೋಡಿದ ಬಳಿಕ ತಿಳಿಯಿತು ಎಂದಿದ್ದಾರೆ.

ತಿರುಮಲದಲ್ಲಿ ಕಲ್ಯಾಣ ಮಂಟಪ ಉದ್ಘಾಟನೆ

ಬೆಂಗಳೂರು: ಮುಜರಾಯಿ ಇಲಾಖೆಯಿಂದ ತಿರುಮಲದ ಕರ್ನಾಟಕ ಛತ್ರದಲ್ಲಿ ನಿರ್ಮಾಣಗೊಂಡಿರುವ ಕೃಷ್ಣರಾಜೇಂದ್ರ ಒಡೆಯರ್ ಬ್ಲಾಕ್ ಕಲ್ಯಾಣ ಮಂಟಪವನ್ನು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಉದ್ಘಾಟಿಸಿದರು.

ಸುಮಾರು 500 ಆಸನದ ಸಾಮರ್ಥ್ಯದ ಈ ಕಲ್ಯಾಣ ಮಂಟಪವನ್ನು ಉದ್ಘಾಟಿಸಿದ ಬಳಿಕ ಮಾತನಾಡಿದ ಅವರು, ತಿರುಮಲದಲ್ಲಿ ನಿರ್ಮಾಣವಾಗಿರುವ 36 ಕೊಠಡಿಗಳ ವಿಐಪಿ ಬ್ಲಾಕ್, ಕಲ್ಯಾಣಿ ಮತ್ತು ಕರ್ನಾಟಕ ಛತ್ರದ ದೇವಸ್ಥಾನದ ಉದ್ಘಾಟನೆ ಸೆಪ್ಟೆಂಬರ್‌ನಲ್ಲಿ ನಡೆಯಲಿದೆ.

36 ಸುಸಜ್ಜಿತ ಕೊಠಡಿಗಳ ವಿಐಪಿ ಬ್ಲಾಕ್ ಕಾಮಗಾರಿ ಈಗಾಗಲೇ ಬಹುತೇಕ ಪೂರ್ಣವಾಗಿದೆ. ಅಂತಿಮ ಹಂತದ ಕೆಲಸಗಳು ಪ್ರಗತಿಯಲ್ಲಿವೆ. ಸೆಪ್ಟೆಂಬರ್ ವೇಳೆಗೆ ಪೂಣಗೊಳ್ಳಲಿದೆ ಎಂದು ಭರವಸೆ ನೀಡಿದರು.

ಸೆಪ್ಟೆಂಬರ್‌ನಲ್ಲಿ ನಡೆಯುವ ಈ ಕಾರ್ಯಕ್ರಮದಲ್ಲಿ ಕರ್ನಾಟಕ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಹಾಗೂ ಆಂಧ್ರದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಸೇರಿ ಅನೇಕ ಗಣ್ಯರು ಭಾಗವಹಿಸಲಿದ್ದಾರೆ. ಕರ್ನಾಟಕ ಸರಕಾರದಿಂದ ನಿರ್ಮಾಣಗೊಂಡಿ ರುವ 36 ಕೋಣೆಯ ಬ್ಲಾಕ್, ಕಲ್ಯಾಣಿ ಮತ್ತು ದೇವಸ್ಥಾನದ ಉದ್ಘಾಟನೆ ನಡೆಯಲಿದೆ. ಈ ಮೂಲಕ ಬಹಳ ವರ್ಷಗಳ ಕರ್ನಾಟಕ ಭಕ್ತರ ಕನಸು ನನಸಾಗಲಿದೆ ಎಂದರು. ಕಾರ್ಯಕ್ರಮದಲ್ಲಿ ಕಂದಾಯ ಇಲಾಖೆಯ ಸರಕಾರದ ಪ್ರಧಾನ ಕಾರ್ಯದರ್ಶಿಗಳಾದ ರಾಜೇಂದ್ರ ಕುಮಾರ್ ಕಠಾರಿಯ, ಮುಜರಾಯಿ ಇಲಾಖೆ ಆಯುಕ್ತರಾದ ಎಂ. ವಿ ವೆಂಕಟೇಶ್ ಸೇರಿದಂತೆ ಅನೇಕ ಮುಖಂಡರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

ಮುಜರಾಯಿ ಇಲಾಖೆಯಿಂದ ತಿರುಮಲದ ಕರ್ನಾಟಕ ಛತ್ರದಲ್ಲಿ ನಿರ್ಮಾಣಗೊಂಡಿರುವ ಕೃಷ್ಣರಾಜೇಂದ್ರ ಒಡೆಯರ್ ಬ್ಲಾಕ್ ಕಲ್ಯಾಣ ಮಂಟಪವನ್ನು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಉದ್ಘಾಟಿಸಿದರು.

ಆನ್‌ಲೈನ್ ಬುಕ್ಕಿಂಗ್ ಲಭ್ಯ

ಸದ್ಯ ಉದ್ಘಾಟನೆಯಾಗಿರುವ ಕೃಷ್ಣರಾಜೇಂದ್ರ ಒಡೆಯರ್ ಬ್ಲಾಕ್ ಕಲ್ಯಾಣ ಮಂಟಪದಲ್ಲಿ 500 ಆಸನಗಳ ಸಾಮರ್ಥ್ಯ ಹಾಗೂ 13 ಕೊಠಡಿಗಳನ್ನು ಒಳಗೊಂಡಿದೆ. ಕರ್ನಾಟಕದಿಂದ ಬಂದು ತಿರುಮಲದಲ್ಲಿ ಮದುವೆ, ನಾಮಕರಣ ಮೊದಲಾದ ಶುಭ ಸಮಾರಂಭಗಳನ್ನು ಆಯೋಜನೆ ಮಾಡುವ ಭಕ್ತರಿಗೆ ಇದು ಲಭ್ಯವಿರಲಿದೆ. ಶ್ರೀ ಕೃಷ್ಣ ರಾಜೇಂದ್ರ ಒಡೆಯರ್ ಕಲ್ಯಾಣ ಮಂಟಪ ನಿರ್ಮಾಣ ತಿರುಮಲಕ್ಕೆ ಆಗಮಿಸುವ ಕರ್ನಾಟಕದ ಭಕ್ತರ ಅನುಕೂಲತೆಯತ್ತ ರಾಜ್ಯ ಸರಕಾರ ಕೈಗೊಂಡ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ. ಆನ್ ಲೈನ್ ಮೂಲಕ ಬುಕ್ಕಿಂಗ್ ಮಾಡಿಕೊಂಡು ಈ ಸೇವೆಯನ್ನು ಕರ್ನಾಟಕದ ಭಕ್ತರು ಪಡೆದುಕೊಳ್ಳಬಹುದು ಎಂದು ಅಭಿಪ್ರಾಯಪಟ್ಟರು.

ಕೇಂದ್ರಕ್ಕೆ ಎಚ್‌ಡಿಕೆ ಪತ್ರ ಬರೆದ ಬೆನ್ನಿಗೆ ಬೆಂಬಲ ಬೆಲೆ ಪ್ರಕಟ

ಮಾವಿಗೆ ಕೇಂದ್ರದ ಬೆಂಬಲ ಬೆಲೆ

ಬೆಂಗಳೂರು: ರಾಜ್ಯದ ಮಾವು ಬೆಳೆಗಾರರಿಗೆ ಕೇಂದ್ರ ಸರಕಾರ ಸ್ಪಂದಿಸಿದ್ದು, ಕೇಂದ್ರ ಸಚಿವ ಕುಮಾರಸ್ವಾಮಿ ಬರೆದಿದ್ದ ಪತ್ರ ದಿನದಂದೇ ಕೇಂದ್ರ ಬೆಂಬಲ ಬೆಲೆ ಘೋಷಿಸಿದೆ.

